ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸಪತ್ರಿಕೆ

ಸಂಪುಟ : 5 । ಸಂಚಿಕೆ : 6 । ಜೂನ್ - 2023 । ಪುಟಗಳು : 20 । ಬೆಲೆ : 25/-

## ಕರ್ನಾಟಕ ವಿಧಾನಸಭೆ – 2023



**ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು,
ಹಣಕಾಸು, ಆಡಳಿತ ಸುಧಾರಣೆ,
ಗುಪ್ತಚರ ಖಾತೆ




**ಡಿ.ಕೆ. ಶಿವಕುಮಾರ**
ಮಾನ್ಯ ಉಪಮುಖ್ಯಮಂತ್ರಿಗಳು,
ಜಲಸಂಪನ್ಮೂಲ,
ಬೆಂಗಳೂರು ನಗರ ಅಭಿವೃದ್ಧಿ ಖಾತೆ



**ಸಹಕಾರ ಸಚಿವರಾಗಿ**
**ಕೆ.ಎನ್. ರಾಜಣ್ಣ**

# ಶ್ರೇಷ್ಠ ಸಹಕಾರಿಗೆ ಸಂದ ಗೌರವ : ಸಹಕಾರ ಸಚಿವರಾಗಿ ಕೆ.ಎನ್. ರಾಜಣ್ಣ

ಮುಖ್ಯಮಂತ್ರಿ ಸಿದ್ದರಾಮಯ್ಯ ರವರ ನೇತೃತ್ವದ ಸರ್ಕಾರದಲ್ಲಿ ಸಂಪುಟ ದರ್ಜೆಯ ಸಚಿವರಾಗಿ ಸಹಕಾರಿ ರತ್ನ ಪುರಸ್ಕೃತರು, ಅನುಭವಿ ಸಹಕಾರಿ ಮುಖಂಡರು ಆಗಿರುವ ಕೆ.ಎನ್. ರಾಜಣ್ಣ ನವರು ಸಹಕಾರ ಇಲಾಖೆಯ ನೇತೃತ್ವ ವಹಿಸಿದ್ದಾರೆ. ಕೆ.ಎನ್. ರಾಜಣ್ಣ ರವರು ವಿದ್ಯಾರ್ಥಿ ದಿಸೆಯಿಂದಲೇ ಹಲವು ಹೋರಾಟಗಳ ಮೂಲಕ ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸಿದವರು. ಸ್ವಾತಂತ್ರ್ಯ ಹೋರಾಟಗಾರರು ಮತ್ತು ರೈತಾಪಿ ಕುಟುಂಬದಿಂದ ಬಂದಿರುವ ಅವರು ವೃತ್ತಿಯಲ್ಲಿ ವಕೀಲರಾಗಿ ಪ್ರವೃತ್ತಿಯಲ್ಲಿ ಸಹಕಾರ ಕ್ಷೇತ್ರದಲ್ಲಿ ತೊಡಗಿಸಿಕೊಂಡರು.



1975ರಲ್ಲಿ ತುಮಕೂರು ತಾಲ್ಲೂಕು ಕ್ಯಾತ್ಸಂದ್ರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರಾಗುವ ಮೂಲಕ ಸಹಕಾರ ರಂಗವನ್ನು ಪ್ರವೇಶ ಮಾಡುತ್ತಾರೆ. ನಂತರ, ತುಮಕೂರು ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ನಿರ್ದೇಶಕರಾಗಿ, 1979 ರಿಂದ 89 ರವರೆಗೆ ಸಂಘದ ಅಧ್ಯಕ್ಷರಾಗಿ, ಕ್ಯಾತ್ಸಂದ್ರ ಶ್ರೀ ಚಂದ್ರಮೌಳೇಶ್ವರ ಪತ್ತಿನ ಸಹಕಾರ ಸಂಘದ ಸಂಸ್ಥಾಪಕ ಅಧ್ಯಕ್ಷರಾಗಿ, ತುಮಕೂರು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ನಿರ್ದೇಶಕರಾಗಿ ಹಾಗೂ 2003 ರಿಂದ 4 ಬಾರಿ ಅಧ್ಯಕ್ಷರಾಗಿ ಪ್ರಸ್ತುತ ಬ್ಯಾಂಕಿನ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ.

ಈ ಹಿಂದೆ ತುಮಕೂರು ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕರಾಗಿ ಸಹಕಾರ ಶಿಕ್ಷಣ ತರಬೇತಿ ಹಾಗೂ ಪ್ರಚಾರಕ್ಕೆ ಒತ್ತು ನೀಡಿದ್ದಾರೆ. ಕರ್ನಾಟಕ ರಾಜ್ಯ ಮಾರಾಟ ಸಹಕಾರ ಮಹಾಮಂಡಳದಲ್ಲಿ 3 ಬಾರಿ ನಿರ್ದೇಶಕರಾಗಿ, 2 ಬಾರಿ ತುಮಕೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ನಿರ್ದೇಶಕರಾಗಿ, NAFSCOB ಉಪಾಧ್ಯಕ್ಷರಾಗಿ, ನವದೆಹಲಿಯ ನಾಫೆಡ್ (NAFED) ನಿರ್ದೇಶಕರಾಗಿ, ನವದೆಹಲಿಯ ಕೋ-ಆಪರೇಟಿವ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ನಿರ್ದೇಶಕರಾಗಿ, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕಿಗೆ 24-09-2001 ರಿಂದ 2005 ರವರೆಗೆ ಅಧ್ಯಕ್ಷರಾಗಿಯೂ, 2005 ರಿಂದ ಇಲ್ಲಿಯವರೆಗೆ ನಿರ್ದೇಶಕರಾಗಿಯೂ ಸೇವೆ ಸಲ್ಲಿಸುತ್ತಿದ್ದು, ದಿನಾಂಕ : 12-08-2015 ರಿಂದ 2020ರ ಅವಧಿಗೆ ಪುನಃ ಅಧ್ಯಕ್ಷರಾಗಿ ಸೇವೆಯನ್ನು ಸಲ್ಲಿಸಿರುತ್ತಾರೆ.

ಕೆ.ಎನ್.ಆರ್. ಸೌಹಾರ್ದ ಪತ್ತಿನ ಸಹಕಾರಿ ನಿ., ಮಧುಗಿರಿ, ಕೆ.ಎನ್.ಆರ್. ಮಹಿಳಾ ಪತ್ತಿನ ಸಹಕಾರಿ ನಿ., ತುಮಕೂರು ಮತ್ತು ಕೆ.ಎನ್.ಆರ್. ಸೌಹಾರ್ದ ಪತ್ತಿನ ಸಹಕಾರಿ ನಿ., ತುಮಕೂರು ಇವುಗಳ ಗೌರವಾಧ್ಯಕ್ಷರಾಗಿ, ಮಾರ್ಗದರ್ಶನ ಮಾಡುತ್ತಿದ್ದಾರೆ. ಅನೇಕ ಅಂತಾರಾಷ್ಟ್ರೀಯ ಸಹಕಾರಿ ಸಮ್ಮೇಳನಗಳಲ್ಲಿ ಸಹಕಾರಿ ಕ್ಷೇತ್ರವನ್ನು ಪ್ರತಿನಿಧಿಸಿ ಸಹಕಾರಾಭಿವೃದ್ಧಿಗೆ ಹೆಚ್ಚಿನ ಆಸ್ತೆ ವಹಿಸಿರುತ್ತಾರೆ.

ರಾಜಕೀಯ ರಂಗದಲ್ಲಿ 1997ರಲ್ಲಿ ಕರ್ನಾಟಕ ವಿಧಾನ ಪರಿಷತ್ತಿಗೆ ಶಾಸಕರಾಗಿ ಆಯ್ಕೆಗೊಂಡು 2004 ರವರೆಗೆ ಸೇವೆ ಸಲ್ಲಿಸಿರುತ್ತಾರೆ. 2004 ರಿಂದ 2008 ರವರೆಗೆ ತುಮಕೂರು ಜಿಲ್ಲೆಯ ಬೆಳ್ಳಾವಿ ವಿಧಾನ ಸಭಾ ಕ್ಷೇತ್ರದ ಶಾಸಕರಾಗಿ ನಂತರ 2013 ರಲ್ಲಿ ಮಧುಗಿರಿ ಕ್ಷೇತ್ರದ ಶಾಸಕರಾಗಿ ಸೇವೆ ಸಲ್ಲಿಸಿದ್ದು 2023ರ ವಿಧಾನಸಭೆ ಚುನಾವಣೆಯಲ್ಲಿ ಮಧುಗಿರಿ ವಿಧಾನ ಸಭಾ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಕೃಷಿ ಪತ್ತಿನ ವ್ಯವಸ್ಥೆ ಹಾಗೂ ಸಹಕಾರ ಕ್ಷೇತ್ರದ ವಿವಿಧ ವಲಯಗಳ ಅಭಿವೃದ್ಧಿಗೆ ಶ್ರಮಿಸುತ್ತಾ ಬಂದಿರುವ ಕೆ.ಎನ್. ರಾಜಣ್ಣ ಅವರ ಸೇವೆಯನ್ನು ಪರಿಗಣಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು ಶ್ರೀಯುತರನ್ನು ಸಹಕಾರ ಸಚಿವರನ್ನಾಗಿ ನೇಮಕ ಮಾಡಿರುತ್ತಾರೆ.

ತುಮಕೂರು ಜಿಲ್ಲಾ ಸಹಕಾರಿ ಯೂನಿಯನ್‌ಗೆ ಈ ಹಿಂದೆ ಸುಮಾರು 1 ಎಕರೆ ವಿಸ್ತೀರ್ಣವುಳ್ಳ ನಿವೇಶನವನ್ನು ದೊರಕಿಸಿ ಕೊಡುವಲ್ಲಿ ಮತ್ತು ಸುಸಜ್ಜಿತವಾದ ಕಟ್ಟಡ ನಿರ್ಮಾಣದಲ್ಲಿ ಕೆ.ಎನ್. ರಾಜಣ್ಣನವರ ಸೇವೆ ಅದ್ವಿತೀಯವಾದದ್ದು.

ತುಮಕೂರು ಡಿ.ಸಿ.ಸಿ. ಬ್ಯಾಂಕಿನ ಅಧ್ಯಕ್ಷರಾಗಿ ಗ್ರಾಮೀಣ ಬಡ ಮಹಿಳೆಯರ ಹಿತದೃಷ್ಟಿಯನ್ನು ಲಕ್ಷ್ಯದಲ್ಲಿಟ್ಟುಕೊಂಡು ರಾಷ್ಟ್ರದಲ್ಲಿಯೇ ಪ್ರಪ್ರಥಮವಾಗಿ ಕಾಮಧೇನು ಕ್ರೆಡಿಟ್ ಕಾರ್ಡ್ ಯೋಜನೆಯನ್ನು 31-03-2002ರಂದು ಸ್ವಸಹಾಯ ಗುಂಪುಗಳಿಗೆ ಪರಿಚಯಿಸಿ ಜಿಲ್ಲೆಯ ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕಾಗಿ ಶ್ರಮಿಸಿರುತ್ತಾರೆ.

ತುಮಕೂರು ಜಿಲ್ಲೆಯ 10 ತಾಲ್ಲೂಕುಗಳಲ್ಲಿ ಬರಗಾಲದ ದವಡೆಗೆ ಸಿಲುಕಿರುವ ಜಾನುವಾರುಗಳಿಗೆ ಮೇವು ಒದಗಿಸಲು ಕರ್ನಾಟಕ ಸರ್ಕಾರ ಒಟ್ಟು 40 ಗೋಶಾಲೆಗಳನ್ನು ತೆರೆದಿದ್ದು, ಅಲ್ಲಿಗೆ ಬರುವ ರೈತರು ಅದರಲ್ಲೂ ರೈತ ಹೆಣ್ಣು ಮಕ್ಕಳು ಹಾಗೂ ಅವರ ಮಕ್ಕಳಿಗೆ ಬ್ಯಾಂಕಿನ ವತಿಯಿಂದ ಉಚಿತವಾಗಿ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಬಿಸಿ ಊಟೋಪಚಾರದ ವ್ಯವಸ್ಥೆಯನ್ನು ಕೈಗೊಂಡು ರೈತರ ಸಂಕಷ್ಟಗಳಿಗೆ ಸ್ಪಂದಿಸಿ ಇಡೀ ರಾಜ್ಯಕ್ಕೆ ಮಾದರಿಯಾಗಿದ್ದಾರೆ.


ಕರ್ನಾಟಕ ವಿಧಾನಸಭೆ ಚುನಾವಣೆ - 2023
ಚುನಾಯಿತ ಪ್ರಮುಖ ಸಹಕಾರಿ ಮುಖಂಡರು
ಜಿ.ಟಿ. ದೇವೇಗೌಡ
ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ,
ಮೈಸೂರು
ಎಸ್.ಟಿ. ಸೋಮಶೇಖರ್
ಯಶವಂತಪುರ ವಿಧಾನಸಭಾ ಕ್ಷೇತ್ರ,
ಬೆಂಗಳೂರು ನಗರ
ಎಚ್.ಕೆ. ಪಾಟೀಲ್
ಗದಗ ವಿಧಾನಸಭಾ ಕ್ಷೇತ್ರ,
ಗದಗ
ಬಾಲಚಂದ್ರ ಜಾರಕಿಹೊಳಿ
ಅರಬಾವಿ ವಿಧಾನಸಭಾ ಕ್ಷೇತ್ರ,
ಬೆಳಗಾವಿ
ಕೆ.ಎನ್. ರಾಜಣ್ಣ
ಮಧುಗಿರಿ ವಿಧಾನಸಭಾ ಕ್ಷೇತ್ರ,
ತುಮಕೂರು
ಲಕ್ಷ್ಮಣ ಸವದಿ
ಅಥಣಿ ವಿಧಾನಸಭಾ ಕ್ಷೇತ್ರ,
ಬೆಳಗಾವಿ
ಎಚ್.ಡಿ. ರೇವಣ್ಣ
ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ,
ಹಾಸನ
ಆರ್.ವಿ. ದೇಶಪಾಂಡೆ
ಹಳಿಯಾಳ ವಿಧಾನಸಭಾ ಕ್ಷೇತ್ರ,
ಉತ್ತರ ಕನ್ನಡ
ಶಿವಾನಂದ ಪಾಟೀಲ
ಬಸವನ ಬಾಗೇವಾಡಿ ವಿಧಾನಸಭಾ ಕ್ಷೇತ್ರ,
ವಿಜಯಪುರ
ಶ್ಯಾಮನೂರು ಶಿವಶಂಕರಪ್ಪ
ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ,
ದಾವಣಗೆರೆ
ಕೆ. ಷಡಕ್ಷರಿ
ತಿಪಟೂರು ವಿಧಾನಸಭಾ ಕ್ಷೇತ್ರ,
ತುಮಕೂರು
ಡಿ. ಸುಧಾಕರ್
ಹಿರಿಯೂರು ವಿಧಾನಸಭಾ ಕ್ಷೇತ್ರ,
ಚಿತ್ರದುರ್ಗ
ಶಿವರಾಮ್ ಹೆಬ್ಬಾರ್
ಯಲ್ಲಾಪುರ ವಿಧಾನಸಭಾ ಕ್ಷೇತ್ರ,
ಉತ್ತರ ಕನ್ನಡ
ಜಿ.ಡಿ. ಹರೀಶ್‌ಗೌಡ
ಹುಣಸೂರು ವಿಧಾನಸಭಾ ಕ್ಷೇತ್ರ,
ಮೈಸೂರು
ಶಶಿಕಲಾ ಜೊಲ್ಲೆ
ನಿಪ್ಪಾಣಿ ವಿಧಾನಸಭಾ ಕ್ಷೇತ್ರ,
ಬೆಳಗಾಂ

## ಸಂಪಾದಕೀಯ



ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ
ಅಧ್ಯಕ್ಷರು

**ಇತ್ತೀಚೆಗೆ ಸುಪ್ರೀಂ ಕೋರ್ಟ್ ಪತ್ತಿನ ಸಹಕಾರ ಸಂಘದ ಆದಾಯ ತೆರಿಗೆ ಕುರಿತು ತೀರ್ಪು ನೀಡಿದ್ದು, ಇದರಿಂದ ದೇಶದ ಎಲ್ಲಾ ಪತ್ತಿನ ಸಹಕಾರ ಸಂಘಗಳು ಆದಾಯ ತೆರಿಗೆಯಿಂದ ವಿನಾಯಿತಿ ಪಡೆದಿವೆ. ಇದರಿಂದ ಪತ್ತಿನ ಸಹಕಾರ ಸಂಘಗಳು ಮತ್ತಷ್ಟು ಆರ್ಥಿಕ ಚೇತರಿಕೆ ಕಂಡು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಹಕಾರಿಯಾಗಲಿದೆ.**

# ನೂತನ ಸರ್ಕಾರ ರಚನೆ



ಕರ್ನಾಟಕ ರಾಜ್ಯದಲ್ಲಿ ನೂತನ ಸರ್ಕಾರ ಅಸ್ತಿತ್ವಕ್ಕೆ ಬಂದಿದೆ. ಮುಖ್ಯಮಂತ್ರಿಗಳಾಗಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿಗಳಾಗಿ ಡಿ.ಕೆ. ಶಿವಕುಮಾರ್ ಹಾಗೂ 32 ಸಚಿವರುಗಳು ಪ್ರಮಾಣ ವಚನ ಮತ್ತು ಪ್ರತಿಜ್ಞಾವಿಧಿ ಸ್ವೀಕರಿಸಿದ್ದಾರೆ.

ಪೂರ್ಣಪ್ರಮಾಣದ ಸಚಿವ ಸಂಪುಟದ ಸಚಿವರುಗಳಿಗೆ ಮುಖ್ಯಮಂತ್ರಿಗಳು ಖಾತೆಗಳ ಹಂಚಿಕೆ ಮಾಡಿದ್ದಾರೆ. ಸಹಕಾರ ಸಚಿವರಾಗಿ ಸಹಕಾರಿ ಮುಖಂಡರೂ ಆದ ಕೆ.ಎನ್. ರಾಜಣ್ಣ ಅವರು ಅಧಿಕಾರ ಸ್ವೀಕರಿಸಿದ್ದಾರೆ. ಪತ್ತಿನ ಸಹಕಾರ ಮಹಾಮಂಡಳದ ಆಡಳಿತ ಮಂಡಳಿ ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದ ಉಪಮುಖ್ಯಮಂತ್ರಿ ಹಾಗೂ ಸಚಿವರುಗಳಿಗೆ ಹಾಗೆಯೇ ಚುನಾಯಿತ ಎಲ್ಲಾ ಶಾಸಕರುಗಳಿಗೆ ಅಭಿನಂದನೆಗಳನ್ನು ಸಲ್ಲಿಸುತ್ತಿದೆ.

ಚುನಾಯಿತ ಜನಪ್ರತಿನಿಧಿಗಳಲ್ಲಿ ಸಹಕಾರಿ ಮುಖಂಡರುಗಳು ಇರುವುದು ಸಂತಸದ ವಿಚಾರ. ಸಹಕಾರ ಕ್ಷೇತ್ರದ ಬೆಳವಣಿಗೆಗೆ ಸರ್ಕಾರ ಮತ್ತು ಎಲ್ಲಾ ಶಾಸಕರು ಸಂಪೂರ್ಣ ಸಹಕಾರ ನೀಡಬಲ್ಲರು ಎಂಬ ಆಶಾಭಾವನೆ ಇದೆ.

ಇತ್ತೀಚೆಗೆ ಸುಪ್ರೀಂ ಕೋರ್ಟ್ ಪತ್ತಿನ ಸಹಕಾರ ಸಂಘದ ಆದಾಯ ತೆರಿಗೆ ಕುರಿತು ತೀರ್ಪು ನೀಡಿದ್ದು, ಇದರಿಂದ ದೇಶದ ಎಲ್ಲಾ ಪತ್ತಿನ ಸಹಕಾರ ಸಂಘಗಳು ಆದಾಯ ತೆರಿಗೆಯಿಂದ ವಿನಾಯಿತಿ ಪಡೆದಿವೆ. ಇದರಿಂದ ಪತ್ತಿನ ಸಹಕಾರ ಸಂಘಗಳು ಮತ್ತಷ್ಟು ಆರ್ಥಿಕ ಚೇತರಿಕೆ ಕಂಡು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಹಕಾರಿಯಾಗಲಿದೆ.

ಆದಾಯ ತೆರಿಗೆ ವಿನಾಯಿತಿ ಕುರಿತು ರಾಜ್ಯದ ಎಲ್ಲಾ ರೀತಿಯ ಸಹಕಾರ ಸಂಸ್ಥೆಗಳು, ಸಹಕಾರಿ ಮುಖಂಡರುಗಳು ಸುಪ್ರೀಂ ಕೋರ್ಟಿನ ತೀರ್ಪನ್ನು ಸ್ವಾಗತಿಸಿರುವುದು ಸಂತಸದ ವಿಚಾರವೂ ಆಗಿದೆ.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**

ನಂ. 16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್‌ರಸ್ತೆ,
ಮಲ್ಲೇಶ್ವರಂ, ಬೆಂಗಳೂರು – 560003
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org

**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ**

ಕಾರ್ಯನಿರ್ವಾಹಕ ಸಂಪಾದಕರು:
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್ ಗೌಡ**

ಸದಸ್ಯರು :
**ಶ್ರೀ ಕೆ. ಕೃಷ್ಣಮೂರ್ತಿ, ಶ್ರೀ ಜಿ. ಮಲ್ಲಿಕಾರ್ಜುನಯ್ಯ**
**ಶ್ರೀ ಹೆಚ್.ಟಿ. ನಾಗೇಶ್, ಶ್ರೀ ಚಿತ್ತರಂಜನ್ ಬೋಳಾರ್**

ಸಂಪಾದಕರು :
**ಶ್ರೀಮತಿ ಪಿ. ಆಶಾಲತಾ**
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರಭಾರ)

## ನಾಮನಿರ್ದೇಶನ ರದ್ದು

**ಬೆಂಗಳೂರು** : ಕರ್ನಾಟಕ ಸರ್ಕಾರವು ವಿವಿಧ ರೀತಿಯ ಸಹಕಾರ ಸಂಘ ಸಂಸ್ಥೆಗಳಿಗೆ ಈ ಹಿಂದೆ ನಾಮನಿರ್ದೇಶನ ಮಾಡಿದ್ದ ಆದೇಶವನ್ನು ರದ್ದುಪಡಿಸಲಾಗಿದೆ.

ಇದರಿಂದ ತಾಲ್ಲೂಕು ಮಟ್ಟಕ್ಕಿಂತ ಕಡಿಮೆ, ತಾಲ್ಲೂಕು, ಜಿಲ್ಲಾ, ರಾಜ್ಯಮಟ್ಟದ ಹಾಗೂ ಇತರೆ ವಿವಿಧ ಕಾರ್ಯವ್ಯಾಪ್ತಿಯನ್ನು ಒಳಗೊಂಡ ಎಲ್ಲಾ ತರಹದ ಸಹಕಾರ ಸಂಘಗಳ / ಸಂಸ್ಥೆ / ಬ್ಯಾಂಕುಗಳ ಆಡಳಿತ ಮಂಡಳಿಗಳಿಗೆ ಮಾಡಿರುವ ಎಲ್ಲಾ ಅಧಿಕಾರೇತರ ಸದಸ್ಯರ ನಾಮನಿರ್ದೇಶನಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಸಹಕಾರ ಇಲಾಖೆ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ಎ.ಸಿ. ದಿವಾಕರ್ ಅವರು ಆದೇಶ ಹೊರಡಿಸಿದ್ದಾರೆ.

## ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಹಿರಿಯ ಪತ್ರಕರ್ತ ಕೆ.ವಿ. ಪ್ರಭಾಕರ್ ನೇಮಕ



**ಬೆಂಗಳೂರು** : ಹಿರಿಯ ಪತ್ರಕರ್ತ ಕೆ.ವಿ. ಪ್ರಭಾಕರ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರರನ್ನಾಗಿ ಸರ್ಕಾರ ನೇಮಕಗೊಳಿಸಿದೆ.

**ಸುಭಾಷಿತ :** ಎನ್ನ ಕಾಯವ ದಂಡಿಗೆಯ ಮಾಡಯ್ಯ, ಎನ್ನ ಶಿರವ ಸೋರೆಯ ಮಾಡಯ್ಯ, ಎನ್ನ ನರಗಳ ತಂತಿಯ ಮಾಡಯ್ಯ, ಬತ್ತೀಸ ರಾಗವ ಹಾಡಯ್ಯ, ಉರದಲೊತ್ತಿ ಬಾರಿಸು ಕೂಡಲ ಸಂಗಮದೇವ! – ಬಸವಣ್ಣ

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು "ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು" ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಓ.
ಐದು ವರ್ಷಗಳ ಚಂದಾ: ರೂ : 1770/-

**ಸೂಚನೆ :**
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

### ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ರವರಿಂದ ಪ್ರತಿಜ್ಞಾವಿಧಿ ಬೋಧನೆ

# ರಾಜ್ಯದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್;

## ನೂತನ ಸಂಪುಟದ ಸಚಿವರಾಗಿ ಶಾಸಕರ ಪ್ರಮಾಣವಚನ ಸ್ವೀಕಾರ





**ಬೆಂಗಳೂರು :** ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ರವರು, ಉಪಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಹಾಗೂ ಎಂಟು ಸಚಿವರುಗಳು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ರವರಿಂದ ಪ್ರಮಾಣ ವಚನ ಮತ್ತು ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ನಗರದ ಕಂಠೀರವ ಕ್ರೀಡಾಂಗಣದಲ್ಲಿ ಮೇ 20ರಂದು ಏರ್ಪಡಿಸಿದ್ದ ನೂತನ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಮಂತ್ರಿಮಂಡಲದ ಸದಸ್ಯರುಗಳ ಅಧಿಕಾರದ ಮತ್ತು ಗೋಪ್ಯತಾ ಸಮಾರಂಭದಲ್ಲಿ ಸಂಪುಟ ದರ್ಜೆ ಸಚಿವರುಗಳಾಗಿ ಡಾ. ಜಿ. ಪರಮೇಶ್ವರ, ಕೆ.ಹೆಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಎಂ.ಬಿ. ಪಾಟೀಲ್, ಸತೀಶ್ ಜಾರಕಿಹೊಳಿ, ಪ್ರಿಯಾಂಕ್ ಖರ್ಗೆ, ರಾಮಲಿಂಗಾ ರೆಡ್ಡಿ ಮತ್ತು ಬಿ.ಝಡ್. ಜಮೀರ್ ಅಹ್ಮದ್‌ಖಾನ್ ರವರುಗಳು ಪ್ರಮಾಣ ವಚನ ಸ್ವೀಕರಿಸಿದರು.

ಈ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದ ಎಂ. ಮಲ್ಲಿಕಾರ್ಜುನ ಖರ್ಗೆ, ರಾಷ್ಟ್ರೀಯ ಮುಖಂಡರುಗಳಾದ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ಸುಶೀಲ್ ಕುಮಾರ್ ಶಿಂಧೆ, ಕೆ.ಸಿ. ವೇಣುಗೋಪಾಲ, ರಣದೀಪ್ ಸಿಂಗ್ ಸುರ್ಜೆವಾಲಾ, ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳಾದ ಭೂಪೇಶ್ ಬಘೇಲ್, ಎಮ್.ಕೆ. ಸ್ಟಾಲಿನ್, ನಿತೀಶ್ ಕುಮಾರ್, ಹೇಮಂತ್ ಸೋರೇನ್, ಅಶೋಕ್ ಗೆಹ್ಲೋಟ್, ಬಿಹಾರ್ ಉಪಮುಖ್ಯಮಂತ್ರಿ ತೇಜಸ್ವಿ ಯಾದವ್, ಜಮ್ಮು ಮತ್ತು ಕಾಶ್ಮೀರ ಮಾಜಿ ಮುಖ್ಯಮಂತ್ರಿಗಳಾದ ಫಾರುಕ್ ಅಬ್ದುಲ್ಲಾ ಮತ್ತು ಮೆಹಬೂಬಾ ಮುಫ್ತಿ, ಮಧ್ಯಪ್ರದೇಶ ಮಾಜಿ ಮುಖ್ಯಮಂತ್ರಿ ಕಮಲ್‌ನಾಥ್, ಕಮ್ಯುನಿಸ್ಟ್ ಪಕ್ಷದ ಮುಖಂಡರುಗಳಾದ ಸೀತಾರಾಮ ಯಚೂರಿ, ಡಿ.ಕೆ. ರಾಜಾ, ಸಂಸದ ಡಿ.ಕೆ. ಸುರೇಶ್, ಮಾಜಿ ಮುಖ್ಯಮಂತ್ರಿ ಎಂ. ವೀರಪ್ಪ ಮೊಯ್ಲಿ, ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್, ವಿವಿಧ ರಾಜ್ಯಗಳ ರಾಜಕೀಯ ಪಕ್ಷಗಳ ಮುಖಂಡರುಗಳು, ಚಲನಚಿತ್ರ ನಟರಾದ ಶಿವರಾಜ್‌ಕುಮಾರ್, ಕಮಲ್ ಹಾಸನ್, ದುನಿಯಾ ವಿಜಯ್, ರಮ್ಯಾ, ಸಾಧುಕೋಕಿಲ ಸೇರಿದಂತೆ ಸಾಹಿತಿಗಳು, ವಿವಿಧ ವಲಯಗಳ ಗಣ್ಯಗಳು ಉಪಸ್ಥಿತರಿದ್ದರು. ಸರ್ಕಾರದ ಮುಖ್ಯಕಾರ್ಯದರ್ಶಿ ವಂದಿತಾ ಶರ್ಮಾ ಅವರು ಕಾರ್ಯಕ್ರಮ ನಿರೂಪಿಸಿದರು.

ದಿನಾಂಕ : 27-05-2023 ರಂದು ರಾಜಭವನದಲ್ಲಿ ಸಂಪುಟ ದರ್ಜೆಯ 24 ಸಚಿವರು ರಾಜ್ಯಪಾಲರಿಂದ ಪ್ರತಿಜ್ಞಾವಿಧಿ ಸ್ವೀಕರಿಸಿದರು. ವಿವರ ಈ ಕೆಳಕಂಡಂತೆ ಇದೆ.



**ಸಿದ್ದರಾಮಯ್ಯ**
ಮುಖ್ಯಮಂತ್ರಿ, ಹಣಕಾಸು, ಆಡಳಿತ ಸುಧಾರಣೆ, ಗುಪ್ತಚರ, ಇತರೆ



**ಡಿ.ಕೆ. ಶಿವಕುಮಾರ್**
ಉಪ ಮುಖ್ಯಮಂತ್ರಿ ಜಲಸಂಪನ್ಮೂಲ, ಬೆಂಗಳೂರು ನಗರ ಅಭಿವೃದ್ಧಿ



**ಡಾ. ಜಿ. ಪರಮೇಶ್ವರ್**
ಗೃಹ (ಗುಪ್ತಚರ ಹೊರತುಪಡಿಸಿ)



**ಎಂ.ಬಿ. ಪಾಟೀಲ್**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ



**ಕೆ.ಹೆಚ್. ಮುನಿಯಪ್ಪ**
ಆಹಾರ ಮತ್ತು ನಾಗರಿಕ ಪೂರೈಕೆ,
ಗ್ರಾಹಕ ವ್ಯವಹಾರಗಳು



**ಕೆ.ಜೆ. ಜಾರ್ಜ್**
ಇಂಧನ



**ಬಿ.ಝಡ್. ಜಮೀರ್ ಅಹ್ಮದ್ ಖಾನ್**
ವಸತಿ ಮತ್ತು ವಕ್ಫ್




**ರಾಮಲಿಂಗಾರೆಡ್ಡಿ**
ಸಾರಿಗೆ, ಮುಜರಾಯಿ




**ಸತೀಶ ಜಾರಕಿಹೊಳಿ**
ಲೋಕೋಪಯೋಗಿ



**ಪ್ರಿಯಾಂಕ್ ಖರ್ಗೆ**
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್‌ರಾಜ್ ಹಾಗೂ ಐಟಿ ಬಿಟಿ



**ಎಚ್.ಕೆ. ಪಾಟೀಲ**
ಕಾನೂನು ಮತ್ತು ಸಂಸದೀಯ ವ್ಯವಹಾರ,
ಪ್ರವಾಸೋದ್ಯಮ



**ಕೃಷ್ಣ ಬೈರೇಗೌಡ**
ಕಂದಾಯ



**ಎನ್. ಚಲುವರಾಯಸ್ವಾಮಿ**
ಕೃಷಿ



**ಕೆ. ವೆಂಕಟೇಶ್**
ಪಶುಸಂಗೋಪನೆ, ರೇಷ್ಮೆ



**ಡಾ. ಎಚ್.ಸಿ. ಮಹದೇವಪ್ಪ**
ಸಮಾಜ ಕಲ್ಯಾಣ




**ಈಶ್ವರ ಖಂಡ್ರೆ**
ಅರಣ್ಯ, ಪರಿಸರ




**ಕೆ.ಎನ್. ರಾಜಣ್ಣ**
ಸಹಕಾರ



**ದಿನೇಶ್ ಗುಂಡೂರಾವ್**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ



**ಶರಣಬಸಪ್ಪ ದರ್ಶನಾಪುರ**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ



**ಶಿವಾನಂದ ಪಾಟೀಲ**
ಜವಳಿ, ಸಕ್ಕರೆ, ಕೃಷಿ ಮಾರುಕಟ್ಟೆ




**ಆರ್.ಬಿ. ತಿಮ್ಮಾಪುರ**
ಅಬಕಾರಿ, ಮುಜರಾಯಿ



**ಎಸ್.ಎಸ್. ಮಲ್ಲಿಕಾರ್ಜುನ್**
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ



**ಶಿವರಾಜ ತಂಗಡಗಿ**
ಹಿಂದುಳಿದ ವರ್ಗಗಳು ಹಾಗೂ ಪರಿಶಿಷ್ಟ ಪಂಗಡ ಕಲ್ಯಾಣ




**ಡಾ. ಶರಣಪ್ರಕಾಶ ಪಾಟೀಲ್**
ವೈದ್ಯಕೀಯ ಶಿಕ್ಷಣ, ಕೌಶಲಾಭಿವೃದ್ಧಿ



**ಮಂಕಾಳ ಸುಬ್ಬ ವೈದ್ಯ**
ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲ ಸಾರಿಗೆ



**ಲಕ್ಷ್ಮೀ ಹೆಬ್ಬಾಳ್ಕರ್**
ಮಹಿಳಾ-ಮಕ್ಕಳ ಕಲ್ಯಾಣ



**ರಹೀಮ್ ಖಾನ್**
ಪೌರಾಡಳಿತ, ಹಜ್



**ಡಿ. ಸುಧಾಕರ್**
ಯೋಜನೆ ಮತ್ತು ಸಾಂಖ್ಯಿಕ



**ಸಂತೋಷ ಲಾಡ್**
ಕಾರ್ಮಿಕ



**ಎನ್.ಎಸ್. ಬೋಸರಾಜು**
ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ



**ಬಿ.ಎಸ್. ಸುರೇಶ್**
ನಗರಾಭಿವೃದ್ಧಿ, ನಗರ ಯೋಜನಾ ಪ್ರಾಧಿಕಾರ



**ಮಧು ಬಂಗಾರಪ್ಪ**
ಪ್ರಾಥಮಿಕ-ಪ್ರೌಢ ಶಿಕ್ಷಣ



**ಡಾ. ಎಂ.ಸಿ. ಸುಧಾಕರ್**
ಉನ್ನತ ಶಿಕ್ಷಣ



**ಬಿ. ನಾಗೇಂದ್ರ**
ಯುವಜನ ಸೇವೆ ಕ್ರೀಡೆ ಹಾಗೂ ಕನ್ನಡ ಮತ್ತು ಸಂಸ್ಕೃತಿ

# ಕರ್ನಾಟಕ ವಿಧಾನಸಭಾ ಅಧ್ಯಕ್ಷರಾಗಿ ಯು.ಟಿ. ಖಾದರ್ ಆಯ್ಕೆ



**ಬೆಂಗಳೂರು :** ಕರ್ನಾಟಕ ವಿಧಾನಸಭೆಯ ಅಧ್ಯಕ್ಷರಾಗಿ ಹಿರಿಯ ಶಾಸಕ, ಮಾಜಿ ಸಚಿವ ಯು.ಟಿ. ಖಾದರ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಬಿ.ಝಡ್. ಜಮೀರ್ ಅಹ್ಮದ್ ಖಾನ್, ಶಾಸಕ ಅಜಯ್‌ಸಿಂಗ್ ಅವರುಗಳು ಉಪಸ್ಥಿತರಿದ್ದರು. ಅವಿರೋಧ ಆಯ್ಕೆಯಾದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸೇರಿದಂತೆ ಸಚಿವರು, ಶಾಸಕರುಗಳು ನೂತನ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರನ್ನು ಸಭಾಧ್ಯಕ್ಷರ ಪೀಠಕ್ಕೆ ಆಹ್ವಾನಿಸಿ ಅಭಿನಂದಿಸಿ ಶುಭಕೋರಿದರು.

# ಜನನಾಯಕ, ದಕ್ಷ ಆಡಳಿತಗಾರ ಸಿದ್ದರಾಮಯ್ಯ

**ಮುಖ್ಯಮಂತ್ರಿ ಸಿದ್ದರಾಮಯ್ಯನವರ** ಜೀವನಗಾಥೆಯೆಂದರೆ ಕೇವಲ ಸ್ವಂತಪರಿಶ್ರಮದಿಂದ ಯಶಸ್ಸಿನ ಎತ್ತರಕ್ಕೆ ಏರಿದ ಈ ನಾಡಿನ ಸಾಮಾನ್ಯ ಮನುಷ್ಯರ ಬದುಕಿನ ಕತೆ. ಸಿದ್ದರಾಮಯ್ಯನವರು ಹುಟ್ಟಿದ್ದು ಈ ನಾಡಿನ ಸಾವಿರಾರು ಹಳ್ಳಿಗಳಲ್ಲೊಂದಾದ ಕುಗ್ರಾಮದಲ್ಲಿ. ಹೆತ್ತವರೇನು ಪ್ರಭಾವಿಗಳಲ್ಲ, ಅವರದ್ದು ಸಾಮಾನ್ಯ ರೈತ ಕುಟುಂಬ. ಹಳ್ಳಿಗಾಡಿನ ಬದುಕಿನ ಎಲ್ಲ ಅಡೆತಡೆಗಳನ್ನು ಸವಾಲಾಗಿ ಸ್ವೀಕರಿಸಿ ಮೆಟ್ಟಿ ನಿಂತು ಸಾಧನೆಯ ಶಿಖರ ಏರಿದ ಸಿದ್ದರಾಮಯ್ಯನವರ ಬಾಳದಾರಿ ಇಂತಹದ್ದೇ ಹಿನ್ನೆಲೆಯಿಂದ ಬಂದವರಿಗೆ ಮಾರ್ಗದರ್ಶನ ಮಾತ್ರವಲ್ಲ ಸ್ಫೂರ್ತಿಯೂ ಹೌದು. ಸಿದ್ದರಾಮಯ್ಯ ಅವರ ಹುಟ್ಟೂರು ಮೈಸೂರು ಜಿಲ್ಲೆಯ ವರುಣಾ ಹೋಬಳಿಯ ಸಿದ್ದರಾಮನ ಹುಂಡಿ ಗ್ರಾಮ, ಜನನ 1948ರ ಆಗಸ್ಟ್ 12. ಇವರದ್ದು ಕೃಷಿ ಪ್ರಧಾನ ಕುಟುಂಬ. ಅಂದಿನ ಕಾಲದಲ್ಲಿ ಎಸ್.ಎಸ್.ಎಲ್.ಸಿ ಪಾಸು ಮಾಡುವುದೇ ಕಠಿಣವಾಗಿತ್ತು. ಅಂತಹ ಪರಿಸ್ಥಿತಿಯಲ್ಲಿ ಸಿದ್ದರಾಮಯ್ಯ ಅವರು ತಮ್ಮ ಕುಟುಂಬದಲ್ಲಿ ಪದವಿ ಪಡೆದ ಮೊದಲಿಗರಾದರು. ಭಾಷಣ ಮಾಡುವುದರಲ್ಲಿ ಸಿದ್ದರಾಮಯ್ಯ ಅವರದ್ದು ಎತ್ತಿದ ಕೈ. ಶಾಲಾ-ಕಾಲೇಜು ದಿನಗಳಲ್ಲಿ ಉತ್ತಮ ಭಾಷಣಕಾರರಾಗಿ ಹೊರಹೊಮ್ಮುವ ಮೂಲಕ ಸಿದ್ದರಾಮಯ್ಯ ಅವರು ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದರು.

**ಹೋರಾಟದ ಬದುಕು :** ನ್ಯಾಯವಾದಿಯಾಗಿ ಸಿದ್ದರಾಮಯ್ಯ ಅವರ ಮನಸ್ಸು ನ್ಯಾಯಾಲಯದಲ್ಲೇ ಕಳೆದು ಹೋಗಲಿಲ್ಲ. ಶೋಷಿತ ವರ್ಗಗಳ ಪರ ಅವರ ಮನ ಸದಾ ಮಿಡಿಯುತ್ತಿತ್ತು. ಹೀಗಾಗಿ ಸಿದ್ದರಾಮಯ್ಯ ಅವರು ಸಮಾಜವಾದಿ ಚಿಂತಕ ಡಾ. ರಾಮ ಮನೋಹರ ಲೋಹಿಯಾ ಅವರ ಪ್ರಭಾವಕ್ಕೆ ಒಳಗಾದರು.

ವಿದ್ಯಾರ್ಥಿ ಆಗಿದ್ದಾಗ ಮೈಸೂರಿನ ಸುಬ್ಬರಾಯನ ಕೆರೆ ಬಳಿ ಇರುವ ಕಟ್ಟಡದಲ್ಲಿ ರೂಂ ಒಂದನ್ನು ಬಾಡಿಗೆಗೆ ಪಡೆದುಕೊಂಡಿದ್ದ ಸಿದ್ದರಾಮಯ್ಯ ಅವರು ಕಷ್ಟದ ದಿನಗಳನ್ನು ಎದುರಿಸಿದ ಕಾಲವದು. ಅಂದಿನ ಆ ಅನುಭವವೇ ಮುಖ್ಯಮಂತ್ರಿಯಾಗಿ ಬಡವರ ಪರವಾದ ಹಲವಾರು ಯೋಜನೆಗಳನ್ನು ಇಂದು ಜಾರಿಗೆ ತರಲು ಸಹಕಾರಿ ಆಯಿತು. "ಬಡವರ ಕಷ್ಟ ಏನು ಎಂಬುದು ನನಗೆ ಗೊತ್ತು, ಅದನ್ನು ಸ್ವಂತ ಅನುಭವಿಸಿದವನು ನಾನು. ಆದ್ದರಿಂದಲೇ ಅನ್ನಭಾಗ್ಯ, ಕ್ಷೀರಭಾಗ್ಯ, ವಿದ್ಯಾಸಿರಿ, ಮತ್ತಿತರ ಯೋಜನೆಗಳನ್ನು ಜಾರಿಗೆ ತರುವ ನಿರ್ಧಾರ ಕೈಗೊಂಡಿದ್ದೇನೆ" ಎಂದು ಸಿದ್ದರಾಮಯ್ಯ ಅವರು ಹೆಮ್ಮೆಯಿಂದ ಹೇಳಿಕೊಳ್ಳುತ್ತಾರೆ. ಪ್ರೊ। ಪಿ.ಎಂ ಚಿಕ್ಕಬೋರಯ್ಯ ಎಂಬುವರ ಬಳಿ ವಕೀಲ ವೃತ್ತಿಯನ್ನು ಅಭ್ಯಾಸ ಮಾಡುತ್ತಿದ್ದ ಸಿದ್ದರಾಮಯ್ಯ ಅವರು ಕ್ರಮೇಣ ಸಾರ್ವಜನಿಕ ಜೀವನಕ್ಕೆ ತೆರೆದುಕೊಂಡರು. ನಾಯಕತ್ವದ



ಗುಣಲಕ್ಷಣಗಳನ್ನು ಮೈಗೂಡಿಸಿಕೊಳ್ಳತೊಡಗಿದರು.

**ರಾಜಕಾರಣದ ಆರಂಭ :** ಶೋಷಿತ ವರ್ಗಗಳ ಕಷ್ಟಕಾರ್ಪಣ್ಯಗಳಿಗಾಗಿ ಸದಾ ಮಿಡಿಯುತ್ತಿದ್ದ ಸಿದ್ದರಾಮಯ್ಯನವರಲ್ಲಿ ಸಾಮಾಜಿಕ ನ್ಯಾಯದ ಆಶಯ ಸೈದ್ಧಾಂತಿಕವಾಗಿ ಸ್ಪಷ್ಟಗೊಳ್ಳಲು ಕಾರಣವಾದುದು ಡಾ। ರಾಮಮನೋಹರ ಲೋಹಿಯಾ ಚಿಂತನೆ. ಇದಕ್ಕಾಗಿ ಅವರು ವಕೀಲ ವೃತ್ತಿಯನ್ನು ಬಿಟ್ಟು ರಾಜಕಾರಣಕ್ಕೆ ಧುಮುಕಿದರು. ಹೀಗೆ ವಕೀಲ ವೃತ್ತಿಯನ್ನು ಬಿಟ್ಟು ಬಂದ ಸಿದ್ದರಾಮಯ್ಯ ಅವರು ರಾಜಕೀಯದಲ್ಲಿ ಒಂದೊಂದೇ ಹೆಜ್ಜೆ ಇಡುತ್ತಾ ಮುಂದೆ ಸಾಗಿದರು. 1978ರಲ್ಲಿ ರಾಜಕಾರಣದಲ್ಲಿ ಅಧಿಕೃತವಾಗಿ ಪ್ರವೇಶ ಮಾಡಿದ ಸಿದ್ದರಾಮಯ್ಯ ಅವರು ತಾಲ್ಲೂಕು ಅಭಿವೃದ್ಧಿ ಮಂಡಳಿಯ ಸದಸ್ಯರಾದರು. ಜೊತೆ ಜೊತೆಗೆ ರೈತ ಚಳವಳಿಯತ್ತ ಆಕರ್ಷಿತರಾದರು. ಹೀಗಾಗಿ ಅವರಿಗೆ ಪ್ರೊ। ಎಂ.ಡಿ. ನಂಜುಂಡ ಸ್ವಾಮಿ ಅವರ ಒಡನಾಟ ಲಭಿಸಿತು.

**ಮೊದಲ ಆದೇಶ :** ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಸಿದ್ದರಾಮಯ್ಯನವರು ಆಗಲೇ "ನುಡಿದಂತೆ ನಡೆಯಬೇಕು" ಎಂಬ ಸಂಕಲ್ಪವನ್ನು ಮಾಡಿಬಿಟ್ಟಿದ್ದರು. ಚುನಾವಣಾ ಕಾಲದಲ್ಲಿ ಪಕ್ಷ ಪ್ರಕಟಿಸುವ ಪ್ರಣಾಳಿಕೆ ಕೇವಲ ಕಾಗದಗಳ ಕಂತೆಯಾಗಿ ಕಳೆದುಹೋಗಲು ಬಿಡಬಾರದು, ಅದು ಅಧಿಕಾರದ ದಿನಗಳಲ್ಲಿ ಸರ್ಕಾರಕ್ಕೆ ಮಾರ್ಗದರ್ಶಿಯಾಗಬೇಕು ಎಂದು ಅವರು ನಿರ್ಧರಿಸಿದ್ದರು. ಅದರ ಫಲವಾಗಿಯೇ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಮರುಗಳಿಗೆಯಲ್ಲಿಯೇ ಅನ್ನಭಾಗ್ಯ, ಕ್ಷೀರಭಾಗ್ಯ ಮತ್ತು ದಲಿತ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಸಾಲ ಮನ್ನಾ, ಕಾರ್ಯಕ್ರಮಗಳನ್ನು ಘೋಷಿಸಿದರು.

"ರಾಜಕೀಯ ಸ್ವಾತಂತ್ರ್ಯದ ಜೊತೆಯಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸ್ವಾತಂತ್ರ್ಯ ನೀಡಿದರೆ ಮಾತ್ರ, ನೈಜ ಪ್ರಜಾಪ್ರಭುತ್ವ ಸ್ಥಾಪನೆ ಸಾಧ್ಯ, ಎಂಬ





ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಡಾ: ಬಿ.ಆರ್. ಅಂಬೇಡ್ಕರ್ ಅವರ ಆಶಯ ನನ್ನದು. ಆರಂಕುಷಮಿಟ್ಟೊಡಂ ನೆನೆವುದೆನ್ನ ಮನಂ ಬನವಾಸಿ ದೇಶಮಂ ಇದು ಕನ್ನಡ ಆದಿಕವಿ ಪಂಪ ತನ್ನ ನೆಚ್ಚಿನ ನೆಲೆಯಾದ ಬನವಾಸಿಯನ್ನು ಕುರಿತು ಆಡಿದ ಮಾತು. ಕರ್ನಾಟಕವನ್ನು ತಮ್ಮ ಕರ್ಮಭೂಮಿಯನ್ನಾಗಿಸಿಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಆಶಯದ ಮಾತುಗಳನ್ನು ಹಲವಾರು ಸಂದರ್ಭಗಳಲ್ಲಿ ಆಡಿದ್ದಾರೆ. ಕರ್ನಾಟಕವೇ ನನ್ನ ಕರ್ಮಭೂಮಿ, ಕನ್ನಡವೇ ನನ್ನ ಉಸಿರು; ನಾಡು ನುಡಿಯ ಸಂರಕ್ಷಣೆಯೆ ನನ್ನ ಧ್ಯೇಯ; ಸಾಮಾಜಿಕ ನ್ಯಾಯವೇ ನನ್ನ ಆದ್ಯತೆ; ಬಡವರ ಅಭ್ಯುದಯವೇ ನನ್ನ ಪರಮಗುರಿ ಹೀಗೆ ಅವರ ಸದಾಶಯಗಳ ಸರಣಿ ಸಾಗುತ್ತದೆ.

ಈಗ ಆರುವರೆ ಕೋಟಿ ಕನ್ನಡಿಗರ ನಿರೀಕ್ಷೆಯಂತೆ–ಯೇ ಸಿದ್ದರಾಮಯ್ಯನವರು ರಾಜ್ಯದ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿದ್ದಾರೆ. ಕರ್ನಾಟಕದ ನಿಜವಾದ ಸರ್ವಜನಾಂಗಗಳ ಶಾಂತಿಯ ತೋಟ ಆಗಲಿದೆ. ಸರ್ವಜನಪ್ರಿಯ ಸರ್ಕಾರ ರಾಜ್ಯದ ಅಭಿವೃದ್ಧಿಯ ಭಾಗ್ಯದ ಬಾಗಿಲು ತೆರೆಯಲಿದೆ.





**ಮುಖ್ಯಮಂತ್ರಿ ಗಾದಿಯತ್ತ :** 2013ರ ವಿಧಾನಸಭೆ ಚುನಾವಣೆಯಲ್ಲಿ ತಮ್ಮ ಗೆಲುವಿಗೆ ಮಾತ್ರ ಶ್ರಮಿಸದೆ ಇಡೀ ರಾಜ್ಯಸುತ್ತಿ ಕಾಂಗ್ರೆಸ್ ಪರ ಪ್ರಚಾರ ಮಾಡಿ ಪಕ್ಷದ ಭಾರೀ ಗೆಲುವಿಗೆ ಕಾರಣರಾದರು. 2013 ಮೇ 13 ರಂದು ಈ ನಾಡಿನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಸಿದ್ದರಾಮಯ್ಯನವರ ಮುಂದೆ ಹಲವಾರು ಸವಾಲುಗಳಿದ್ದವು. ಹಲವಾರು ಸಂದರ್ಭಗಳಲ್ಲಿ ಅವರೇ ಹೇಳಿಕೊಂಡಿರುವಂತೆ ಕೋಮು ಸೌಹಾರ್ದತೆಗೆ ಹೆಸರಾಗಿದ್ದ ಕರ್ನಾಟಕದಲ್ಲಿ ಕೋಮು ಸೌಹಾರ್ದತೆಯ ವಾತಾವರಣ ಕಲುಷಿತವಾಗಿತ್ತು. ಆರ್ಥಿಕ ಶಿಸ್ತಿಗೆ ಬದ್ಧವಾಗಿದ್ದ ಕರ್ನಾಟಕದಲ್ಲಿ ವಿತ್ತೀಯ ಶಿಸ್ತು ಅಪಾಯದ ಅಂಚಿನಲ್ಲಿತ್ತು. ದಕ್ಷ ಆಡಳಿತಕ್ಕೆ ಹೆಸರಾಗಿದ್ದ ಕರ್ನಾಟಕದ ಖ್ಯಾತಿ ಮಸುಕಾಗುತ್ತಿತ್ತು. ರಾಜ್ಯದ ಸ್ಥಿರ ರಾಜಕೀಯ ಅಸ್ಥಿರತೆಯ ಅಂಚಿಗೆ ಬಂದು ನಿಂತಿತ್ತು. ಸಿದ್ದರಾಮಯ್ಯ ಅವರು ಆರ್ಥಿಕ ಪರಿಸ್ಥಿತಿಯನ್ನು ಸರಿದಾರಿಗೆ ತಂದಿದ್ದರು.

# ಪಕ್ಷದ ನಿಷ್ಠಾವಂತ ಕಟ್ಟಾಳು - ಯುವಜನ ಪ್ರೇರಣಾಶಕ್ತಿ
## ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

2023ರ ವಿಧಾನಸಭೆಯ ರುವಾರಿಯಾಗಿರುವ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಇದೀಗ ರಾಜ್ಯದ ಉಪಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಅವರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ, ಏಳುಬೀಳುಗಳಲ್ಲಿ ಬಂಡೆಯಂತೆ ಪಕ್ಷದ ಜೊತೆ ನಿಂತಿದ್ದಾರೆ. ಪಕ್ಷ ಸಂಘಟನೆಗೆ ಅವರು ಅಪಾರ ಕೊಡುಗೆ ನೀಡಿದ್ದಾರೆ.

ವೈಯಕ್ತಿಕ ಜೀವನದಲ್ಲಿ ಪ್ರಗತಿಪರ ರೈತರಾಗಿ, ವಸತಿ ಯೋಜನೆಗಳ ನಿರ್ಮಾತೃರಾಗಿರುವ ಡಿ.ಕೆ. ಶಿವಕುಮಾರ್, ನ್ಯಾಷನಲ್ ಎಜುಕೇಶನ್ ಫೌಂಡೇಷನ್‌ನ ಸ್ಥಾಪಕ ಅಧ್ಯಕ್ಷರಾಗಿ ಇಂಜಿನಿಯರಿಂಗ್, ನರ್ಸಿಂಗ್ ಹಾಗೂ ಮ್ಯಾನೇಜ್‌ಮೆಂಟ್ ವಿದ್ಯಾಸಂಸ್ಥೆಗಳನ್ನು ಯಶಸ್ವಿಯಾಗಿ ನಡೆಸುತ್ತಿದ್ದಾರೆ. ಅಲ್ಲದೆ ವಿಶ್ವಮಟ್ಟದ ಎರಡು ಪ್ರಾಥಮಿಕ ಶಾಲೆಗಳನ್ನು ನಡೆಸುತ್ತಿದ್ದಾರೆ. ಡಿ.ಕೆ. ಶಿವಕುಮಾರ್ ಬೆಂಗಳೂರಿನ ಆರ್.ಸಿ. ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾಗ ಯುವ ಕಾಂಗ್ರೆಸ್‌ಗೆ ಸೇರಿ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾದರು.

1987ರಲ್ಲಿ ಅವರು ಸಾತನೂರು ಕ್ಷೇತ್ರದಿಂದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿಗೆ ಸದಸ್ಯರಾಗಿ ಆಯ್ಕೆಗೊಂಡರು.

1989ರಲ್ಲಿ ಸಾತನೂರು ವಿಧಾನ ಸಭಾಕ್ಷೇತ್ರದಿಂದ ಸ್ಪರ್ಧಿಸಿ ಅಭೂತಪೂರ್ವ ಜಯಗಳಿಸಿದರು. 1991ರಲ್ಲಿ ಬಂಧಿಖಾನೆ ಖಾತೆ ಸಚಿವರಾದರು.

1999ರಲ್ಲಿ ಎಸ್.ಎಂ. ಕೃಷ್ಣ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಆಯ್ಕೆಗೊಂಡಾಗ ಡಿ.ಕೆ. ಶಿವಕುಮಾರ್ ಅವರ ಹಿಂದೆ ಬೆನ್ನೆಲುಬಾಗಿ ನಿಂತು ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ರೀತಿಯಲ್ಲಿ ಜಯಗಳಿಸಿ ಸರ್ಕಾರ ರಚಿಸುವಲ್ಲಿ ಕಾರಣೀಭೂತರಾದರು.

ಎಸ್.ಎಂ. ಕೃಷ್ಣ ಚುನಾವಣಾ ಪೂರ್ವದಲ್ಲಿ ಪಾಂಚಜನ್ಯ ಮೊಳಗಿಸುವ ಮೂಲಕ ಚುನಾವಣಾ ಸಮರ ಆರಂಭಿಸಿದಾಗ, ಈ ಐತಿಹಾಸಿಕ ಯಾತ್ರೆಯನ್ನು ಆಯೋಜಿಸಿದವರು. ಡಿ.ಕೆ. ಶಿವಕುಮಾರ್, ಇದರಿಂದಲೇ ಕಾಂಗ್ರೆಸ್ ಪಕ್ಷ 139 ಸ್ಥಾನಗಳನ್ನು ಗಳಿಸಿ ಸ್ವಂತ ಬಲದ ಮೇಲೆ ಸರ್ಕಾರವನ್ನು ರಚಿಸುವಂತಾಯಿತು.

2002ರಲ್ಲಿ ನಗರಾಭಿವೃದ್ಧಿ ಖಾತೆ ಸಚಿವರಾಗಿ ರಾಜ್ಯ ನಗರಯೋಜನಾ ಮಂಡಳಿಯ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದರು.

2018ರಲ್ಲಿ ಅಸ್ತಿತ್ವಕ್ಕೆ ಬಂದ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಮೊದಲಿಗೆ ಜಲಸಂಪನ್ಮೂಲ ನಂತರ ಹೆಚ್ಚುವರಿಯಾಗಿ ಕನ್ನಡ ಮತ್ತು ಸಂಸ್ಕೃತಿ ಖಾತೆಯನ್ನು ಡಿ.ಕೆ.ಶಿವಕುಮಾರ್ ನಿರ್ವಹಿಸಿದರು. ಮೈತ್ರಿ ಸರ್ಕಾರದ ಉಳಿವಿಗೆ ಟೊಂಕ ಕಟ್ಟಿ ನಿಂತಿದ್ದ ಶಿವಕುಮಾರ್ ಅವರು ಪಕ್ಷದ ನಾಯಕತ್ವ ತಮಗೆ ಜವಬ್ದಾರಿ ವಹಿಸಿದ ಅನೇಕ ಉಪಚುನಾವಣೆಗಳಲ್ಲಿ ಪಕ್ಷ ಗೆಲುವಂತೆ ನೋಡಿಕೊಂಡರು.



4 ದಶಕಗಳ ಕಾಲ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಸೇನಾನಿಯಾಗಿ ಕಾರ್ಯನಿರ್ವಹಿಸಿರುವ ಡಿ.ಕೆ.ಶಿವಕುಮಾರ್ ಅವರು ಯಾವುದೇ ಸಂದರ್ಭದಲ್ಲೂ ಯಾವುದೇ ಆಮಿಷಗಳಿಗೂ ಬಲಿಯಾಗದೇ ಪಕ್ಷ ನಿಷ್ಠೆಯನ್ನು ಬದಲಿಸಲಿಲ್ಲ.

**ಕೆಪಿಸಿಸಿ ಅಧ್ಯಕ್ಷರಾಗಿ ಪಕ್ಷದ ಸಂಘಟನೆ:**

ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಸೋನಿಯಾ ಗಾಂಧಿ ಅವರು ಮಾರ್ಚ್ 11, 2020ರಂದು ಡಿ.ಕೆ. ಶಿವಕುಮಾರ್ ಅವರನ್ನು ನೇಮಿಸಿದರು.

ಕಳೆದ ಮೂರು ವರ್ಷಗಳ ಅವಧಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಡಿ.ಕೆ. ಶಿವಕುಮಾರ್ ಅವರು ಪಕ್ಷವನ್ನು ಸಂಘಟಿಸಿದ ರೀತಿ ಎಲ್ಲಾ ರಾಜಕೀಯ ನಾಯಕರಿಗೆ ಮಾದರಿಯಾಗಿ ಉಳಿದಿದೆ ಎಂದರೆ ತಪ್ಪಾಗುವುದಿಲ್ಲ.

ರಾಷ್ಟ್ರೀಯ ಕಾಂಗ್ರೆಸ್ ವತಿಯಿಂದ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ ಆರಂಭಿಸಿದಾಗ, ಮತ್ತೆ ತಮ್ಮ ಕಾರ್ಯಕರ್ತರನ್ನು ಜನರತ್ತ ಕಳುಹಿಸಿ ರಾಜ್ಯದಲ್ಲಿ ಯಶಸ್ವಿಯಾಗಿ ಸದಸ್ಯತ್ವ ನೋಂದಣಿ ಅಭಿಯಾನ ಮಾಡಿದರು. ಪಕ್ಷದ ಸದಸ್ಯತ್ವ ಅಭಿಯಾನ ಯಶಸ್ವಿ ಜಾರಿ ಹಾಗೂ ರಾಜ್ಯದಲ್ಲಿ 78 ಲಕ್ಷ ಸದಸ್ಯತ್ವ ನೋಂದಣಿ ಮೂಲಕ ದೇಶದಲ್ಲಿ ಪ್ರಥಮ ಸ್ಥಾನ ಪಡೆದು ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದರು.

ಮೇಕೆದಾಟು ಯೋಜನೆಗೆ ಸರ್ಕಾರ ನಿರ್ಲಕ್ಷ್ಯ ವಹಿಸಿದಾಗ ಈ ಯೋಜನೆ ಆಗ್ರಹಿಸಿ, ಈ ಭಾಗದಲ್ಲಿ 160 ಕಿ.ಮೀ ಪಾದಯಾತ್ರೆ ಮಾಡಿದರು. 75ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಸ್ವಾತಂತ್ರ್ಯ ನಡಿಗೆ ಅಭೂತಪೂರ್ವ ಕಾರ್ಯಕ್ರಮ ಆಯೋಜನೆ ಮಾಡಿ ಅದ್ಭುತ ಹಾಗೂ ವಿಶೇಷವಾಗಿ ಸ್ವಾತಂತ್ರ್ಯ ದಿನ ಆಚರಣೆ ಮಾಡಿದರು.

ರಾಹುಲ್ ಗಾಂಧಿ ಅವರು ಭಾರತ ಜೋಡೋ ಯಾತ್ರೆ ಆರಂಭಿಸಿದ ನಂತರ ಕರ್ನಾಟಕದಲ್ಲಿ 21 ದಿನಗಳ ಕಾಲ 550 ಕಿ.ಮೀ ಉದ್ದದ






ಭಾರತ ಜೋಡೋ ಯಾತ್ರೆ ಯಶಸ್ವಿ ಆಯೋಜನೆ ಮಾಡಿದರು.

ಪ್ರಜಾಧ್ವನಿ ಯಾತ್ರೆ ಮೂಲಕ ರಾಜ್ಯದ ಮೂಲೆ ಮೂಲೆ ಪ್ರವಾಸ ಮಾಡಿ ಎಲ್ಲ ವರ್ಗಗಳ ಜನರ ಸಂಕಷ್ಟ ಆಲಿಸಿದರು. ಅವುಗಳಿಗೆ ಪರಿಹಾರ ಕಂಡುಕೊಳ್ಳು ಯೋಜನೆಗಳನ್ನು ರೂಪಿಸಲು ನೆರವಾದರು.

ನಾ ನಾಯಕಿ ಕಾರ್ಯಕ್ರಮದ ಮೂಲಕ ಮಹಿಳೆಯರಿಗೆ ಉತ್ತೇಜನ ನೀಡಿ ಮಹಿಳೆಯರನ್ನು ಕಾಂಗ್ರೆಸ್ ಪಕ್ಷದ ಕಡೆ ಸೆಳೆಯುವಲ್ಲಿ ಯಶಸ್ವಿಯಾದರು.

ಕಳೆದ ಮೂರು ವರ್ಷಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಹೇಗೆಲ್ಲಾ ಸಂಘಟನೆ ಮಾಡಿ ಪಕ್ಷಕ್ಕೆ ಶಕ್ತಿ ತುಂಬಬಹುದೋ ಆ ಎಲ್ಲಾ ಅವಕಾಶಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಪಕ್ಷವನ್ನು ಮುನ್ನಡೆಸಿದರು. ಕಾಂಗ್ರೆಸ್ ಪಕ್ಷದ ಕಟ್ಟಾಳುವಾಗಿ ಪಕ್ಷದ ಗೆಲುವಿಗೆ ಹೇಗೆಲ್ಲಾ ಕೆಲಸ ಮಾಡಬೇಕೋ ಹಗಲು ರಾತ್ರಿಯನ್ನದೇ ಪಕ್ಷಕ್ಕಾಗಿ ದುಡಿದರು. ಅದರ ಫಲವಾಗಿ ಇಂದು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಕಾರಣವಾಯಿತು. ಇವರ ಸಂಘಟನಾ ಚಾತುರ್ಯದಿಂದ ಸದ್ಯ ಅವರ ಪರಿಶ್ರಮಕ್ಕೆ ತಕ್ಕಂತೆ ಅವರಿಗೆ ರಾಜ್ಯದ ಉಪಮುಖ್ಯಮಂತ್ರಿ ಸ್ಥಾನ ಒಲಿದುಬಂದಿದೆ.





# ಸಹಕಾರ ಕ್ಷೇತ್ರದಲ್ಲಿ ಯುವಜನರ ಪಾಲ್ಗೊಳ್ಳುವಿಕೆ ಅಗತ್ಯ

## ನಷ್ಟದಲ್ಲಿರುವ ಸಹಕಾರ ಸಂಘಗಳ ಪುನಃಶ್ಚೇತನಕ್ಕೆ ಕ್ರಮವಿಡಲು ಸಹಕಾರ ಸಚಿವ ಕೆ.ಎನ್. ರಾಜಣ್ಣ ಸಲಹೆ



**ಬೆಂಗಳೂರು :** ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರು ಬೆಂಗಳೂರಿನ ಸಹಕಾರ ಸಂಘಗಳ ನಿಬಂಧಕರ ಕಚೇರಿಯಲ್ಲಿ ಸಹಕಾರ ಇಲಾಖೆ ಮತ್ತು ವಿವಿಧ ಸಹಕಾರ ಮಹಾಮಂಡಳಗಳ ಕಾರ್ಯಚಟುವಟಿಕೆಗಳು ಹಾಗೂ ಬೆಳವಣಿಗೆ ಕುರಿತು ಹಿರಿಯ ಅಧಿಕಾರಿಗಳಿಂದ ಮಾಹಿತಿ ಪಡೆದರು. ಸಹಕಾರ ಸಚಿವರಾಗಿ ಅಧಿಕಾರ ಸ್ವೀಕರಿಸಿದ ನಂತರ ಇಲಾಖಾಧಿಕಾರಿಗಳ ಪ್ರಥಮ ಸಭೆ ನಡೆಸಿದ ಅವರು ರಾಜ್ಯದ ಸಹಕಾರ ಚಳವಳಿಯ ಬೆಳವಣಿಗೆ ಕುರಿತು ಮೆಚ್ಚುಗೆ ವ್ಯಕ್ತಪಡಿಸಿ ಮುಂಬರುವ ದಿನಗಳಲ್ಲಿ ಚಳವಳಿಯನ್ನು ಬಲಪಡಿಸಲು ಅಧಿಕಾರಿಗಳು ಜಾಗೃತರಾಗಿ ಕಾರ್ಯನಿರ್ವಹಿಸುವಂತೆ ಸಲಹೆ ಮಾಡಿದರು.

ರಾಷ್ಟ್ರಮಟ್ಟದಲ್ಲಿ ದುರ್ಬಲ ಪಟ್ಟಣ ಬ್ಯಾಂಕುಗಳ ಆರ್ಥಿಕ ನೆರವಿಗೆ ಆಶ್ರಯ ಸಹಕಾರ ಸಂಸ್ಥೆ (ಅಂಬ್ರೆಲಾ ಆರ್ಗನೈಜೇಷನ್) ಇರುವ ಮಾದರಿಯಲ್ಲಿ ರಾಜ್ಯದಲ್ಲಿ ನಷ್ಟದಲ್ಲಿರುವ ಸಹಕಾರ ಸಂಘಗಳನ್ನು ಪುನಃಶ್ಚೇತನಗೊಳಿಸುವ ಉದ್ದೇಶದಿಂದ ಇನ್‌ಸ್ಟಿಟ್ಯೂಷನ್ ಪ್ರೊಟೆಕ್ಷನ್ ಸಿಸ್ಟಂ ಮಾದರಿಯ ಟ್ರಸ್ಟ್‌ನ್ನು ಸ್ಥಾಪಿಸಿ ಕಾರ್ಪಸ್ ಫಂಡ್ ಮೂಲಕ ಆರ್ಥಿಕ ನೆರವು ನೀಡುವ ಬಗ್ಗೆ ಸಮಾಲೋಚನೆ ನಡೆಸಿ ಈ ಕುರಿತು ಅಧ್ಯಯನ ಮಾಡಿ ವರದಿ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು. ಈ ವ್ಯವಸ್ಥೆ ಜಾರಿಗೊಂಡರೆ ಹೆಚ್ಚಿನ ಸಂಸ್ಥೆಗಳು ಹೆಚ್ಚು ಸದಸ್ಯರಿಗೆ ಸೇವೆಗಳನ್ನು ಒದಗಿಸುವುದರ ಜೊತೆಗೆ, ಲಾಭದಲ್ಲಿ ಮುನ್ನಡೆಯಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಪ್ರಸ್ತುತ ರಾಜ್ಯದ ಸಹಕಾರ ಕ್ಷೇತ್ರದಲ್ಲಿ 2.70 ಕೋಟಿಗೂ ಅಧಿಕ ಸದಸ್ಯರು ತೊಡಗಿಸಿಕೊಂಡಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಯುವಜನರು ಸಹಕಾರ ಕ್ಷೇತ್ರದಲ್ಲಿ ಪಾಲ್ಗೊಂಡು ಕ್ಷೇತ್ರವನ್ನು ಸದೃಢಗೊಳಿಸಬೇಕಾಗಿದೆ. ಈ ನಿಟ್ಟಿನಲ್ಲಿ ಯುವಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ತಂತ್ರಜ್ಞಾನ ಅಳವಡಿಕೆಯಿಂದ ಪರಿಣಾಮಕಾರಿಯಾಗಿ ಕಾರ್ಯನಿರ್ವಹಣೆ ಜೊತೆಗೆ ಆಡಳಿತದಲ್ಲಿ ಪಾರದರ್ಶಕತೆ ತರಲು ಸಾಧ್ಯ. ಹಾಗೆಯೇ ಸ್ವಸಹಾಯ ಗುಂಪುಗಳು ಸಹ ಪರಿಣಾಮಕಾರಿಯಾಗಿ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಆರ್ಥಿಕ ಸ್ವಾವಲಂಬನೆ ಸಾಧ್ಯ ಎಂದರು.

ಸಭೆಯಲ್ಲಿ ಸಹಕಾರ ಇಲಾಖೆಯ ವಿವಿಧ ಯೋಜನೆಗಳ ಅನುಷ್ಠಾನ, ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯ ಯಶಸ್ಸು, ವಿವಿಧ ಸಹಕಾರ ಮಹಾಮಂಡಳಗಳ ಕಾರ್ಯಚಟುವಟಿಕೆಗಳ ಬಗ್ಗೆ ಸಹಕಾರ ಸಚಿವರು ಮಾಹಿತಿ ಪಡೆದರು.

ಸಭೆಯ ಆರಂಭದಲ್ಲಿ ಸಹಕಾರ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ಎಸ್.ಆರ್. ಉಮಾಶಂಕರ್ ಅವರು ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಅವರನ್ನು ಸ್ವಾಗತಿಸಿ, ಗೌರವಿಸಿದರು. ನಂತರ ಸಹಕಾರ ಇಲಾಖೆಯ ಬೆಳವಣಿಗೆಯನ್ನು ಕುರಿತು ಸಚಿವರಿಗೆ ವಿವರಿಸಿದರು. ಸಹಕಾರ ಸಂಘಗಳ ನಿಬಂಧಕರಾದ ಕ್ಯಾಪ್ಟನ್ ಡಾ. ಕೆ. ರಾಜೇಂದ್ರ, ಯಶಸ್ವಿನಿ ಟ್ರಸ್ಟ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಎಂ. ವೆಂಕಟಸ್ವಾಮಿ, ಸರ್ಕಾರದ ವಿಶೇಷ ಕರ್ತವ್ಯಾಧಿಕಾರಿ ಎ.ಸಿ. ದಿವಾಕರ್, ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಪ್ರಕಾಶ ರಾವ್, ಕೆ.ಎಂ.ಎಫ್. ವ್ಯವಸ್ಥಾಪಕ ನಿರ್ದೇಶಕರಾದ ಬಿ.ಸಿ. ಸತೀಶ್, ಕಾಸ್ಕಾರ್ಡ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕರಾದ ಆರ್. ಶ್ರೀಧರ್, ಗ್ರಾಹಕರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಗುರುಸ್ವಾಮಿ, ಮಾರಾಟ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಹೆಚ್.ಸಿ. ಬಾಲಶೇಖರ್, ಅಪರ ನಿಬಂಧಕರುಗಳಾದ ಕೆ.ಎಂ. ಆಶಾ, ಕೆ.ಎಸ್. ನವೀನ್, ಜಂಟಿ ನಿಬಂಧಕರುಗಳಾದ ಅಶ್ವಥನಾರಾಯಣ, ಜಿ.ಎಂ. ಪಾಟೀಲ್, ಕಾಂತರಾಜು, ಡಾ. ಉಮೇಶ್, ಕಲ್ಲಪ್ಪ ಓಬಣ್ಣಗೋಳ, ಲಕ್ಷ್ಮೀಪತಯ್ಯ, ನೀಲಪ್ಪ ಸಿದ್ದಣ್ಣವರ, ಪ್ರವೀಣ್ ನಾಯಕ್, ಉಪನಿಬಂಧಕರುಗಳಾದ ವೈ.ಟಿ. ಅಶ್ವಿನಿ, ವಿಜಯಕುಮಾರ್, ಶಶಿಧರ್, ಬಿ.ಕೆ. ಸಲೀಂ ಅವರುಗಳು ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# 2000 ರೂಪಾಯಿ ಮುಖಬೆಲೆ ನೋಟು ಚಲಾವಣೆಯನ್ನು ಹಿಂಪಡೆದ ಭಾರತೀಯ ರಿಸರ್ವ್ ಬ್ಯಾಂಕ್

**ನವದೆಹಲಿ :** ದೇಶಾದ್ಯಂತ 2,000 ರೂ. ಮುಖಬೆಲೆಯ ನೋಟುಗಳನ್ನು ಚಲಾವಣೆಯಿಂದ ಹಿಂಪಡೆಯಲು ಭಾರತೀಯ ರಿಸರ್ವ್ ಬ್ಯಾಂಕ್ ನಿರ್ಧರಿಸಿದೆ. 2023 ಸೆಪ್ಟೆಂಬರ್ 30 ರೊಳಗೆ ಅವುಗಳನ್ನು ವಿನಿಮಯ ಮಾಡಿಕೊಳ್ಳುವಂತೆ ಎಲ್ಲರಿಗೂ ತಿಳಿಸಿದೆ. ಬಿಡುಗಡೆ ಪ್ರಕಟಣೆಯಲ್ಲಿ ಭಾರತೀಯ ರಿಸರ್ವರ್‌ಬ್ಯಾಂಕ್ ಮಾಹಿತಿ ನೀಡಿದ್ದು," 2000 ರೂ. ಮುಖಬೆಲೆಯ ನೋಟುಗಳನ್ನು ಚಲಾವಣೆಯಿಂದ ಹಿಂಪಡೆಯಲು ನಿರ್ಧರಿಸಲಾಗಿದೆ. ಅಕ್ಟೋಬರ್1 ರಿಂದ ಈ ನೋಟುಗಳು ಚಲಾವಣೆಯಲ್ಲಿ ಇರುವುದಿಲ್ಲ. ಹೀಗಾಗಿ, ಸೆ.30ರ ಒಳಗೆ ಸಾರ್ವಜನಿಕರು ಬ್ಯಾಂಕ್‌ಗಳಿಗೆ ತೆರಳಿ ನೋಟು ಬದಲಾವಣೆ ಮಾಡಿಕೊಳ್ಳಬೇಕು " ಎಂದು ಸೂಚನೆ ನೀಡಿದೆ.

**ಮೇ 23 ರಿಂದ ಬದಲಾವಣೆಗೆ ಅವಕಾಶ :** ಸದ್ಯ 2,000 ರೂಪಾಯಿ ನೋಟು ಹೊಂದಿದ್ದರೆ ಮೇ 23ರ ನಂತರ ಸಮೀಪದ ಬ್ಯಾಂಕ್‌ಗೆ ತೆರಳಿ ನೋಟು ಬದಲಾವಣೆ ಮಾಡಿಕೊಳ್ಳಬಹುದು. ಆದರೆ, ಒಮ್ಮೆಗೆ 10 ನೋಟುಗಳ ಅಂದರೆ 20 ಸಾವಿರ ರೂಪಾಯಿ ಮಾತ್ರ ಬದಲಾವಣೆ ಮಾಡಿಕೊಳ್ಳಲು ಅವಕಾಶ ಮಾಡಿಕೊಡಲಾಗಿದೆ.

**2016ರಲ್ಲಿ 500 ಹಾಗೂ 1000 ನೋಟ್‌ಬ್ಯಾನ್ ಆಗಿತ್ತು :** 2016ರ ನವೆಂಬರ್8 ರಂದು 500 ಹಾಗೂ 1000 ಮುಖಬೆಲೆಯ ನೋಟು ಅಮಾನ್ಯೀಕರಣದ ನಂತರ ಹೊಸದಾಗಿ 2000 ರೂ. ನೋಟುಗಳನ್ನು ಪರಿಚಯಿಸಲಾಗಿತ್ತು. ಸದ್ಯ ಆ ನೋಟಿನ ಚಲಾವಣೆ ನಿಲ್ಲಿಸಿ ವಾಪಸ್ ಪಡೆಯುವುದಾಗಿ ಆರ್‌ಬಿಐ ತಿಳಿಸಿದೆ.

**ಐದು ವರ್ಷಗಳ ಹಿಂದೆಯೇ ನೋಟು ಮುದ್ರಣ ಸ್ಥಗಿತ :** 2018ರಲ್ಲಿಯೇ 2000 ರೂಪಾಯಿ ನೋಟುಗಳ ಮುದ್ರಣವನ್ನು ಸ್ಥಗಿತಗೊಳಿಸಲಾಗಿತ್ತು. ಈ ಕುರಿತಾಗಿ ಸದನಕ್ಕೆ ಕೇಂದ್ರ ಸರ್ಕಾರ ಮಾಹಿತಿ ನೀಡಲಾಗಿತ್ತು. ಇದೀಗ ಕ್ಲೀನ್ ನೋಟ್ ಅಭಿಯಾನದಡಿ ನೋಟ್‌ಗಳನ್ನು ಹಿಂಪಡೆಯಲು ಆರ್‌ಬಿಐ ಮುಂದಾಗಿದೆ. ಮೇ 23, 2023ರಿಂದ ಯಾವುದೇ ಬ್ಯಾಂಕ್‌ನಲ್ಲಿ 2000 ನೋಟುಗಳನ್ನು ಇತರ ಮುಖಬೆಲೆಯ ನೋಟುಗಳಾಗಿ ವಿನಿಮಯ ಮಾಡಿಕೊಳ್ಳಬಹುದು ಎಂದು ಆರ್‌ಬಿಐ ಸೂಚಿಸಿದೆ.

**ಸೆಪ್ಟೆಂಬರ್30 ನಂತರವೂ ಕಾನೂನು ಬದ್ಧವಾಗಿರುತ್ತವೆ :** ಜನರು ಬ್ಯಾಂಕ್‌ಗಳೊಂದಿಗೆ ನೋಟುಗಳನ್ನು ಬದಲಾಯಿಸಿಕೊಳ್ಳಲು 4 ತಿಂಗಳ ಸಮಯ ಸಾಕು. ಚಲಾವಣೆಯಲ್ಲಿರುವ ಹೆಚ್ಚಿನ ರೂ 2000 ನೋಟುಗಳು ಸೆಪ್ಟೆಂಬರ್ 30 ರ ನಿರ್ದಿಷ್ಟ ಸಮಯದ ಚೌಕಟ್ಟಿನೊಳಗೆ ಬ್ಯಾಂಕ್‌ಗಳಿಗೆ ಹಿಂತಿರುಗುತ್ತವೆ ಎಂದು ಆರ್‌ಬಿಐ ಹೇಳಿದೆ. ಸೆಪ್ಟೆಂಬರ್ 30ರ ನಂತರವೂ ಕಾನೂನುಬದ್ಧವಾಗಿ ಉಳಿಯುತ್ತದೆ. ಜನರು ಗಾಬರಿಯಾಗುವ ಅಗತ್ಯವಿಲ್ಲ ಎಂದು ಮೂಲಗಳು ತಿಳಿಸಿವೆ.

**ನೋಟು ಬದಲಾವಣೆ ಮಾತ್ರ :** 2000 ರೂ. ಮುಖಬೆಲೆಯ ನೋಟುಗಳು ಕಾನೂನುಬದ್ಧವಾಗಿ ಮುಂದುವರಿಯಲಿವೆ. ಸಮಯಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುತ್ತಿದೆ. ಸಾರ್ವಜನಿಕ ಸದಸ್ಯರಿಗೆ ಸಾಕಷ್ಟು ಸಮಯವನ್ನು ಒದಗಿಸಲು, ಎಲ್ಲಾ ಬ್ಯಾಂಕ್‌ಗಳು ಸೆಪ್ಟೆಂಬರ್ 30, 2023 ರವರೆಗೆ 2000 ರೂ. ಬ್ಯಾಂಕ್‌ನೋಟುಗಳಿಗೆ




ಠೇವಣಿ ಮತ್ತು/ಅಥವಾ ವಿನಿಮಯ ಸೌಲಭ್ಯವನ್ನು ಒದಗಿಸುತ್ತವೆ ಎಂದು ತಿಳಿಸಿದೆ.

**ನೋಟ್ ಬ್ಯಾನ್ ಬಳಿಕ ನಗದು ಚಲಾವಣೆ ಶೇ.83ರಷ್ಟು ಏರಿಕೆ :** ನೋಟು ರದ್ದತಿ ಅಥವಾ ಡಿಮಾನೆಟೈಸೇಷನ್ ಬಳಿಕ ಸಾರ್ವಜನಿಕರಲ್ಲಿರುವ ನಗದು ಮೌಲ್ಯ ದುಪ್ಪಟ್ಟಾಗಿದ್ದು, ನಗದು ಚಲಾವಣೆ ಶೇ.83ರಷ್ಟು ಏರಿಕೆಯಾಗಿದೆ ಎಂದು ರಿಸರ್ವ್ ಬ್ಯಾಂಕ್ ಅಂಕಿ ಅಂಶಗಳು ಮಾಹಿತಿ ನೀಡಿವೆ. ಚಲಾವಣೆಯಲ್ಲಿದ್ದ ಶೇ.86 ರಷ್ಟು ಕರೆನ್ಸಿಯನ್ನು ರದ್ದುಗೊಳಿಸಿದ ಏಳು ವರ್ಷಗಳ ಬಳಿಕ ಸಾರ್ವಜನಿಕರಲ್ಲಿರುವ ನಗದು ಮೌಲ್ಯ ದುಪ್ಪಟ್ಟಾಗಿದೆ.

ಮಾಧ್ಯಮಗಳಿಗೆ ದೊರೆತ ರಿಸರ್ವ್ ಬ್ಯಾಂಕ್ ಅಂಕಿ ಅಂಶಗಳ ಪ್ರಕಾರ, 2022ರ ಡಿಸೆಂಬರ್ 23ರಂದು ದೇಶದಲ್ಲಿ ಚಲಾವಣೆಯಲ್ಲಿರುವ ಕರೆನ್ಸಿಯ ಮೌಲ್ಯ (ಅಥವಾ ಸಾರ್ವಜನಿಕರ ಬಳಿಯಿರುವ ನಗದು) 32.42 ಲಕ್ಷ ಕೋಟಿ ರೂ ಎಂದು ತಿಳಿದುಬಂದಿದೆ.

ಕಪ್ಪುಹಣ ತಡೆ ಮತ್ತು ಭ್ರಷ್ಟಾಚಾರದ ವಿರುದ್ಧ ಹೋರಾಡಲು ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಹಳೆಯ 1,000 ಮತ್ತು 500 ರೂ ನೋಟುಗಳನ್ನು ನ.8, 2016 ರಂದು ನಿಷೇಧಿಸಲಾಗಿತ್ತು. ಅಂದು 17.74 ಲಕ್ಷ ಕೋಟಿ ರೂ ಮೌಲ್ಯದ ನೋಟುಗಳು ಚಲಾವಣೆಯಲ್ಲಿದ್ದವು. ನೋಟು ನಿಷೇಧದ ಬಳಿಕ ಚಲಾವಣೆಯಲ್ಲಿರುವ ನಗದು ಮೌಲ್ಯ 9 ಲಕ್ಷ ಕೋಟಿಯಷ್ಟು ಕುಸಿದಿತ್ತು. 2017ರ ಜನವರಿಗೆ ಹೋಲಿಸಿದರೆ, ಚಲಾವಣೆಯಲ್ಲಿರುವ ನಗದು 3 ಪಟ್ಟು ಏರಿಕೆ ಅಥವಾ ಶೇ260ರಷ್ಟು ಜಿಗಿತ ಕಂಡಿದೆ. ನ.8, 2016 ರಿಂದ ಪರಿಗಣಿಸಿದರೆ ಸುಮಾರು 83 ಪ್ರತಿಶತ ಏರಿಕೆಯಾಗಿದೆ ಎಂದು ಹೇಳಲಾಗಿದೆ.

ನ.8, 2016 ರಂದು ಚಲಾವಣೆಯಲ್ಲಿದ್ದ ಒಟ್ಟು 15.4 ಲಕ್ಷ ಕೋಟಿ ರೂ ಮೌಲ್ಯದ ನೋಟುಗಳಲ್ಲಿ 15.3 ಲಕ್ಷ ಕೋಟಿ ರೂ ಮೌಲ್ಯದ ಅಥವಾ ಶೇ 99.3 ರಷ್ಟು ನೋಟುಗಳನ್ನು ಸಾರ್ವಜನಿಕರು ಹಿಂದಿರುಗಿಸಿದ್ದರು. ನಿಷೇಧಿತ ಕರೆನ್ಸಿ ನೋಟುಗಳ ಬದಲಿಗೆ ಹೊಸ 500 ಮತ್ತು 2,000 ರೂ ನೋಟುಗಳು ಚಲಾವಣೆಗೆ ಬಂದಿವೆ. ಆದರೆ, 1,000 ರೂ ನೋಟು ಮರು ಚಲಾವಣೆಗೆ ಬಂದಿಲ್ಲ.

# ಪತ್ತಿನ ಸಹಕಾರ ಸಂಘಗಳಿಗೆ ಆದಾಯ ತೆರಿಗೆ ವಿನಾಯ್ತಿ- ಸರ್ವೋಚ್ಚ ನ್ಯಾಯಾಲಯ ತೀರ್ಪು

ಪತ್ತಿನ ಸಹಕಾರ ಸಂಘಗಳು ಆದಾಯ ತೆರಿಗೆ ಕಾಯ್ದೆ ಕಲಂ 80ಪಿ(4) ಅಡಿಯಲ್ಲಿ ತೆರಿಗೆ ವಿನಾಯಿತಿ ಪಡೆಯಲು ಅರ್ಹವಾಗಿವೆ ಎಂದು ಮಾನ್ಯ ಸರ್ವೋಚ್ಚ ನ್ಯಾಯಾಲಯ ಆದೇಶ ನೀಡಿದೆ.

ಆದಾಯ ತೆರಿಗೆ ಆಯುಕ್ತರು ಹಾಗೂ ಅಣ್ಣಾ ಸಾಹೇಬ್ ಪಾಟೀಲ್ ಮಥಾದಿ ಕಾಮಗಾರ್ ಸಹಕಾರ ಸಂಘದ ವಿವಾದದ ಪ್ರಕರಣದಲ್ಲಿ ಮಹತ್ವದ ಆದೇಶವನ್ನು ಕೋರ್ಟ್ ಹೊರಡಿಸಿದೆ.

ಇದೇ ರೀತಿ ವಿವಿಧ ನ್ಯಾಯಾಲಯಗಳಲ್ಲಿ ಹಲವಾರು ಪತ್ತಿನ ಸಹಕಾರ ಸಂಘಗಳು ಆದಾಯ ತೆರಿಗೆ ವಿನಾಯಿತಿ ಕೋರಿ ನ್ಯಾಯಾಲಯದ ಮೊರೆ ಹೋಗಿವೆ. ಮೇಲಿನ ಪ್ರಕರಣದಲ್ಲಿ ಸರ್ವೋಚ್ಚ ನ್ಯಾಯಾಲಯ ನೀಡಿರುವ ತೀರ್ಪು ದೇಶದ ಲಕ್ಷಕ್ಕೂ ಅಧಿಕ ಸಂಘಗಳಿಗೆ ಪ್ರಯೋಜನಕಾರಿಯಾಗಲಿದೆ.



## ರಾಜ್ಯದ ಪತ್ತಿನ ಸಹಕಾರ ಸಂಘಗಳಲ್ಲಿ ಹರ್ಷ

ಸರ್ವೋಚ್ಚ ನ್ಯಾಯಾಲಯದ ಈ ತೀರ್ಪನ್ನು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ಕೆ. ಲಲಿತ ಜಿ.ಟಿ. ದೇವೇಗೌಡರವರು, ಉಪಾಧ್ಯಕ್ಷರಾದ ಕೆ.ಕೆ. ಮಹೇಂದ್ರಪ್ರಸಾದ್ ಗೌಡರವರು ಹಾಗೂ ಆಡಳಿತಮಂಡಳಿ ಸೇರಿದಂತೆ ಸಹಕಾರಿ ಮುಖಂಡರು ಪತ್ತಿನ ಸಂಘಗಳ ಅಧ್ಯಕ್ಷರು, ನಿರ್ದೇಶಕರುಗಳು ಸ್ವಾಗತಿಸಿದ್ದಾರೆ.

ಪತ್ತಿನ ಮಹಾಮಂಡಳದ ನಿರ್ದೇಶಕರಾದ ಡಾ॥ ಸಂಜಯ ಪಿ ಹೊಸಮಠರವರು ಈ ಬಗ್ಗೆ ಸಂತಸ ವ್ಯಕ್ತಪಡಿಸಿ ಸರ್ವೋಚ್ಚ ನ್ಯಾಯಾಲಯದ ಈ ಐತಿಹಾಸಿಕ ತೀರ್ಪು ಪತ್ತಿನ ಸಹಕಾರ ಸಂಘಗಳಿಗೆ ಹೆಚ್ಚು ಉತ್ತೇಜನ ನೀಡಿದಂತಾಗಿದೆ. ಸಂಘದ ಸದಸ್ಯರಿಗೆ ಹೆಚ್ಚು ಸೇವೆ ನೀಡಲು ಸಾಧ್ಯವಾಗಲಿದೆ ಎಂದು ತಿಳಿಸಿದ್ದಾರೆ.

ಪತ್ತಿನ ಸಹಕಾರ ಸಂಘಗಳಿಗೆ ಸರ್ವೋಚ್ಚ ನ್ಯಾಯಾಲಯ ಆದಾಯ ತೆರಿಗೆ ವಿನಾಯಿತಿ ಆದೇಶ ನೀಡಿರುವುದಕ್ಕೆ ರಾಜ್ಯದ ಸಹಕಾರಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

ಹಲವು ವರ್ಷಗಳಿಂದ ಆದಾಯ ತೆರಿಗೆ ರದ್ದತಿ ಕೋರಿ ಪತ್ತಿನ ಸಹಕಾರ ಮಹಾಮಂಡಳ ಪತ್ತಿನ ಸಹಕಾರ ಸಂಘಗಳ ಮುಖಂಡರುಗಳು ನಿರಂತರ ಹೋರಾಟ ನಡೆಸುತ್ತಾ ಬಂದಿದ್ದರು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಈ ಹಿಂದೆ ನಡೆಸಿದ್ದ ಹೋರಾಟದ ವಿವರಗಳನ್ನು ಮಾಹಿತಿಗಾಗಿ ಪ್ರಕಟಿಸಲಾಗಿದೆ.



ಆದಾಯ ತೆರಿಗೆ ಇಲಾಖೆಯಿಂದ ಉಂಟಾಗುತ್ತಿರುವ ಸಮಸ್ಯೆಗಳನ್ನು ಬಗೆಹರಿಸುವಂತೆ ಕೋರಿ ಮಹಾಮಂಡಳದ ವತಿಯಿಂದ ದೆಹಲಿಗೆ ಭೇಟಿ ನೀಡಿ ಹಣಕಾಸು ಸಚಿವರಾಗಿದ್ದ ಅರುಣ್ ಜೇಟ್ಲಿರವರಿಗೆ ಮನವಿ ಸಲ್ಲಿಸಲಾಗಿತ್ತು. ಸಂಸದರಾಗಿದ್ದ ಶ್ರೀ ಸುರೇಶ್ ಅಂಗಡಿ. ಡಾ. ಪ್ರಭಾಕರ್ ಕೋರೆ, ಪಿ.ಸಿ. ಸಿದ್ದಿಗೌಡರ್ ಮಹಾಮಂಡಳದ ಆಡಳಿತಮಂಡಳಿ ಸದಸ್ಯರುಗಳಾದ ಡಾ॥ಸಂಜಯ ಪಿ ಹೊಸಮಠ, ಶ್ರೀ ವಿ.ರಾಜು, ಶ್ರೀ ಕೆ.ಕೆ. ಮಹೇಂದ್ರಪ್ರಸಾದ್‌ಗೌಡ, ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ, ಶ್ರೀ ಧರೇಪ್ಪ ಮಹದೇವ ಅಲಗೂರ, ಶ್ರೀ ಗುರುಪಾದಪ್ಪಗೌಡ ಬ ಪಾಟೀಲ್, ಶ್ರೀಹೊನ್ನಯ್ಯ ವೀ ಹಿರೇಮಠ, ಶ್ರೀ ಬಿ.ವೀರಯ್ಯ, ಶ್ರೀ ಆಕಾಶ್ ಪಾಟೀಲ್ ಲೆಕ್ಕಪರಿಶೋಧಕರಾದ ಶ್ರೀ ಅಶೋಕ್‌ರವರುಗಳು ಉಪಸ್ಥಿತರಿದ್ದರು

**ಬೆಳಗಾವಿ :** ದಿನಾಂಕ : 17–12–2019ರಂದು ಬೆಳಗಾವಿಯಲ್ಲಿ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ವತಿಯಿಂದ ಆದಾಯ ತೆರಿಗೆ ಇಲಾಖೆಯಿಂದ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಒಂದು ದಿನದ ಪ್ರತಿಭಟನೆಯನ್ನು ಸಹಕಾರಿ ಮುಖಂಡರುಗಳಾದ ಡಾ॥ ಸಂಜಯ ಪಂ. ಹೊಸಮಠ, ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ ಮತ್ತು ಶ್ರೀ ಉಮೇಶ ಶಿ. ಬಾಳಿ ಇವರುಗಳ ನೇತೃತ್ವದಲ್ಲಿ ನಡೆಸಲಾಯಿತು. ಸುಮಾರು 700ಕ್ಕು ಹೆಚ್ಚು ಮಂದಿ ಈ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಮೊದಲಿಗೆ ಕೇಂದ್ರ ಹಣಕಾಸು ಸಚಿವರಾದ ಶ್ರೀಮತಿ ನಿರ್ಮಲ ಸೀತಾರಾಮನ್ ರವರಿಗೆ ಮಹಾಮಂಡಳದ ಪರವಾಗಿ ಮನವಿ ಪತ್ರವನ್ನು ಬೆಳಗಾವಿ ಜಿಲ್ಲೆಯ ಜಿಲ್ಲಾ ಅಪರ ಜಿಲ್ಲಾಧಿಕಾರಿಗಳ ಮೂಲಕ ಮೆರವಣಿಗೆಯಲ್ಲಿ ತೆರಳಿ ಮನವಿ ಸಲ್ಲಿಸಲಾಯಿತು. ಆನಂತರ ಆದಾಯ ತೆರಿಗೆ ಇಲಾಖೆಯ ಜಂಟಿ ಆಯುಕ್ತರಾದ ಶ್ರೀಮತಿ ರಾಜೇಶ್ವರಿ ಮೆನನ್. ರವರರಿಗೆ ಸಲ್ಲಿಸಿ ಪತ್ತಿನ ಸಹಕಾರ ಸಂಘಗಳು ಆದಾಯ ತೆರಿಗೆ ಇಲಾಖೆಯಿಂದ ಎದುರಿಸುತ್ತಿರುವ ಸಮಸ್ಯೆಗಳನ್ನು ನಿರ್ದೇಶಕರುಗಳು ಮನದಟ್ಟು ಮಾಡಿಕೊಟ್ಟರು.



ಆದಾಯ ಇಲಾಖೆಯ ಜಂಟಿ ಆಯುಕ್ತರು ಈ ಬಗ್ಗೆ ಪರಿಶೀಲಿಸಿ ಕ್ರಮವಿಡವುದಾಗಿ ಭರವಸೆ ನೀಡಿದರು ಅವರಿಗೆ ಸಲ್ಲಿಸಿದ ಮನವಿ ಪತ್ರವನ್ನು ಕೇಂದ್ರ ಹಣಕಾಸು ಸಚಿವರಿಗೆ ಸಲ್ಲಿಸುವುದಾಗಿ ತಿಳಿಸಿದರು. ಅನಂತರ, ಬೆಳಗಾವಿಯ ಚನ್ನಮ್ಮ ವೃತ್ತದ ಕನ್ನಡ ಸಾಹಿತ್ಯ ಭವನದಲ್ಲಿ ಪತ್ತಿನ ಸಹಕಾರ ಸಂಘಗಳ ಪ್ರತಿನಿಧಿಗಳ ಸಭೆಯನ್ನು ನಡೆಸಲಾಯಿತು ಮಹಾಮಂಡಳದ ನಿರ್ದೇಶಕರಾದ ಶ್ರೀ ಉಮೇಶ ಶಿ. ಬಾಳಿ ರವರು ಮಾತನಾಡಿ ಮಹಾಮಂಡಳವು ಪತ್ತಿನ ಸಹಕಾರ ಸಂಘಗಳು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಸವಿಸ್ತಾರವಾಗಿ ವಿವರಿಸಿದರು. ಡಾ॥ ಸಂಜಯ ಪಂ. ಹೊಸಮಠ ರವರು ಮಾತನಾಡಿ ಪತ್ತಿನ ಮಹಾಮಂಡಳವು ಪ್ರಾರಂಭದಿಂದ ಈ ಸಮಸ್ಯೆಗಳ ಪರಿಹಾರಕ್ಕೆ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಹಕಾರ ಸಂಘಗಳ ಪ್ರತಿನಿಧಿಗಳಿಗೆ ಮನವರಿಕೆ ಮಾಡಿದರು.

ಸಭೆಯಲ್ಲಿ 500ಕ್ಕು ಹೆಚ್ಚು ಸಹಕಾರ ಸಂಘಗಳ ಪ್ರತಿನಿಧಿಗಳು ಹಾಜರಿದ್ದರು. ಸಭೆ ಮುಗಿದ ನಂತರ ಪತ್ತಿನ ಸಹಕಾರ ಸಂಘಗಳ ಪ್ರತಿನಿಧಿಗಳ ನಿಯೋಗವು ರಾಜ್ಯ ಸಭಾ ಸದಸ್ಯರಾದ ಡಾ॥ ವಿ. ಪ್ರಭಾಕರ ಕೋರೆ ರವರನ್ನು ಭೇಟಿ ಮಾಡಿ ಪತ್ತಿನ ಸಹಕಾರ ಸಂಘಗಳು ಎದುರುಸುತ್ತಿರುವ ಆದಾಯ ತೆರಿಗೆ ಸಮಸ್ಯೆಗಳ ಬಗ್ಗೆ ಕೇಂದ್ರ ಹಣಕಾಸು ಸಚಿವೆ ಶ್ರೀಮತಿ ನಿರ್ಮಲ ಸೀತಾರಾಮನ್ ಹಾಗೂ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ರವರ ಗಮನಕ್ಕೆ ತಂದು ಈ ಸಮಸ್ಯೆಗಳನ್ನು ಬಗೆಹರಿಸಬೇಕೆಂದು ಕೋರಿದರು. ಸಂಸದರಾದ ಡಾ. ಪ್ರಭಾಕರ ಕೋರೆ ಅವರು ಈ ಬಗ್ಗೆ ಸಮಸ್ಯೆಗಳನ್ನು ಕೇಂದ್ರ ಹಣಕಾಸು ಸಚಿವರಿಗೆ ಮತ್ತು ಪ್ರಧಾನ ಮಂತ್ರಿಗಳ ಗಮನಕ್ಕೆ ತಂದು ಸಮಸ್ಯೆಗಳನ್ನು ಬಗೆಹರಿಸುವುದಾಗಿ ಭರವಸೆ ನೀಡಿದರು.





ಕೇಂದ್ರ ಹಣಕಾಸು ಸಚಿವರಾದ ಶ್ರೀಮತಿ ನಿರ್ಮಲ ಸೀತಾರಾಮನ್ ಅವರ ಆಪ್ತ ಕಾರ್ಯದರ್ಶಿಗಳಾದ ವಿಮಲ್ ಬನ್ಸಾಲ್ ಅವರಿಗೆ ಮಹಾಮಂಡಳದ ಪರವಾಗಿ ಮನವಿ ಸಲ್ಲಿಸಲಾಯಿತು.



ಕೇಂದ್ರ ಸಹಕಾರ ಹಾಗೂ ಕೃಷಿ ಸಚಿವರಾದ ಸನ್ಮಾನ್ಯ ಶ್ರೀ ನರೇಂದ್ರ ಸಿಂಗ್ ತೋಮರ್ ಅವರಿಗೆ ಮಹಾಮಂಡಲದ ಪರವಾಗಿ ಮನವಿಯನ್ನು ಅರ್ಪಿಸಲಾಯಿತು.




ಹಾವೇರಿಯಲ್ಲಿ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ಆದಾಯ ತೆರಿಗೆ ಇಲಾಖೆಯಿಂದ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಒಂದು ದಿನದ ಪ್ರತಿಭಟನೆಯನ್ನು ಪತ್ತಿನ ಮಹಾಮಂಡಳದ ನಿರ್ದೇಶಕರುಗಳ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಪ್ರತಿಭಟನೆಯಲ್ಲಿ ಸುಮಾರು 300ಕ್ಕು ಹೆಚ್ಚು ಸಹಕಾರಿ ಮುಖಂಡರುಗಳು/ಪ್ರತಿನಿಧಿಗಳು ಭಾಗವಹಿಸಿದ್ದರು. ಕೇಂದ್ರ ಹಣಕಾಸು ಸಚಿವರಾದ ಶ್ರೀಮತಿ ನಿರ್ಮಲ ಸೀತಾರಾಮನ್ ರವರಿಗೆ ಮಹಾಮಂಡಳದ ಪರವಾಗಿ ಮನವಿ ಪತ್ರವನ್ನು ಹಾವೇರಿಯ ಅಪರ ಜಿಲ್ಲಾಧಿಕಾರಿಗಳಿಗೆ ಮತ್ತು ಆದಾಯ ತೆರಿಗೆ ಇಲಾಖೆಯ ಅಧಿಕಾರಿಗಳಿಗೆ ಮೆರವಣಿಗೆ ತೆರಳಿ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಸಹಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಪತ್ತಿನ ಮಹಾಮಂಡಳದ ನಿರ್ದೇಶಕರುಗಳಾದ ಡಾ॥ ಸಂಜಯ ಪಂ. ಹೊಸಮಠ ಮತ್ತು ಶ್ರೀ ತಮ್ಮಣ್ಣ ಬಿ. ಕೆಂಚರಡ್ಡಿ ರವರು ಸಹಕಾರ ಕ್ಷೇತ್ರಕ್ಕೆ ಮಾರಕವಾಗಿರುವ ಆದಾಯ ತೆರಿಗೆ ಕಾಯ್ದೆಯನ್ನು ಹಿಂಪಡೆಯುವಂತೆ ಕೇಂದ್ರ ಹಣಕಾಸು ಸಚಿವರಾದ ಶ್ರೀ ನಿರ್ಮಲ ಸೀತರಾಮನ್ ರವರಿಗೆ ಮತ್ತು ಆದಾಯ ತೆರಿಗೆ ಅಧಿಕಾರಿಗಳನ್ನು ಆಗ್ರಹಿಸಿದರು. ಅನಂತರ, ಪತ್ತಿನ ಸಹಕಾರ ಸಂಘಗಳ ಪ್ರತಿನಿಧಿಗಳ ಸಭೆಯನ್ನು ನಡೆಸಲಾಯಿತು ಈ ಸಭೆಯಲ್ಲಿ ಪತ್ತಿನ ಸಹಕಾರ ಸಂಘಗಳು ಮುಂದಿನ ದಿನಗಳಲ್ಲಿ ಆದಾಯ ತೆರಿಗೆ ಸಮಸ್ಯೆಗಳ ಕುರಿತು ಕೈಗೊಳ್ಳಬೇಕಾದ ಕ್ರಮಗಳನ್ನು ಚರ್ಚಿಸಲಾಯಿತು. ಈ ಪ್ರತಿಭಟನೆಯಲ್ಲಿ ಹಾವೇರಿ ಜಿಲ್ಲೆಯ ಹಿರಿಯ ಪ್ರಮುಖ ಸಹಕಾರಿ ಮುಖಂಡರುಗಳು ಇನ್ನಿತರರು ಭಾಗವಹಿಸಿದ್ದರು.



ಧಾರವಾಡದಲ್ಲಿ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ಆದಾಯ ತೆರಿಗೆ ಸಮಸ್ಯೆಗಳ ಕುರಿತು ಸಹಕಾರಿಗಳ ಪ್ರತಿಭಟನೆಯನ್ನು ನಡೆಸಲಾಯಿತು ಈ ಪ್ರತಿಭಟನೆಯ ನೇತೃತ್ವವನ್ನು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕರುಗಳು ವಹಿಸಿದ್ದರು.

ಪ್ರತಿಭಟನೆಯಲ್ಲಿ ಸುಮಾರು 500ಕ್ಕು ಹೆಚ್ಚು ಸಹಕಾರಿ ಮುಖಂಡರುಗಳು/ಪ್ರತಿನಿಧಿಗಳು ಭಾಗವಹಿಸಿ ಪ್ರತಿಭಟನೆಯನ್ನು ಯಶಸ್ವಿಗೊಳಿಸಿದರು. ಮೊದಲಿಗೆ ಕೇಂದ್ರ ಹಣಕಾಸು ಸಚಿವರಿಗೆ ಮಹಾಮಂಡಳ ಹಾಗೂ ಸ್ಥಳೀಯ ಸಹಕಾರ ಸಂಘಗಳ ಪರವಾಗಿ ಮನವಿ ಪತ್ರವನ್ನು ಧಾರವಾಡ ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳಿಗೆ ಮೆರವಣಿಗೆ ತೆರಳಿ ನಂತರ ಮನವಿ ಪತ್ರ ಸಲ್ಲಿಸಲಾಯಿತು.

ಈ ಪ್ರತಿಭಟನೆಯಲ್ಲಿ ರಾಜ್ಯ ಪತ್ತಿನ ಸಹಕಾರ ಮಹಾಮಂಡಳದ ನಿರ್ದೇಶಕರುಗಳಾದ ಡಾ॥ ಸಂಜಯ ಪಂ. ಹೊಸಮತ, ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ, ಶ್ರೀ ಉಮೇಶ ಶಿ. ಬಾಳಿ ಹಾಗೂ ಮಾಜಿ ನಿರ್ದೇಶಕರಾದ ಶ್ರೀ ಗುರುರಾಜ್ ಹುಣಸಿಮರದ ಹಾಗೂ ಜಿಲ್ಲೆಯ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷ, ಉಪಾಧ್ಯಕ್ಷರು ಹಾಗೂ ಹಿರಿಯ ಸಹಕಾರಿ ಪ್ರತಿನಿಧಿಗಳು ಭಾಗವಹಿಸಿದ್ದರು.

ಸಹಕಾರ ಸಂಘಗಳ ಉಳಿವಿಗಾಗಿ ಆದಾಯ ತೆರಿಗೆ ವಿನಾಯತಿ ನೀಡಲು ವಿಜಯಪುರದಲ್ಲಿ ಸಹಕಾರಿಗಳ ಪ್ರತಿಭಟನೆ ವಿಜಯಪುರದಲ್ಲಿ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ಆದಾಯ ತೆರಿಗೆ ಇಲಾಖೆಯಿಂದ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಒಂದು ದಿನದ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಪ್ರತಿಭಟನೆಯನ್ನು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಮಹಾಮಂಡಳದ ನಿರ್ದೇಶಕರಾದ ಶ್ರೀ ಗುರುಪಾದಪ್ಪಗೌಡ ಬ. ಪಾಟೀಲ ರವರು ನೇತೃತ್ವದಲ್ಲಿ ನಡೆಸಲಾಯಿತು. ಈ ಪ್ರತಿಭಟನೆಯಲ್ಲಿ ಸುಮಾರು 500ಕ್ಕು ಹೆಚ್ಚು ಸಹಕಾರಿ ಮುಖಂಡರುಗಳು/ಪ್ರತಿನಿಧಿಗಳು ಭಾಗವಹಿಸಿದ್ದರು. ಮೊದಲಿಗೆ ಕೇಂದ್ರ ಹಣಕಾಸು ಸಚಿವರಿಗೆ ಮಹಾಮಂಡಳದ ಪರವಾಗಿ ಮನವಿ ಪತ್ರವನ್ನು ವಿಜಯಪುರ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಮತ್ತು ಆದಾಯ ತೆರಿಗೆ ಇಲಾಖೆಯ ಅಧಿಕಾರಿಗಳಿಗೆ ಮೆರವಣಿಗೆ ತೆರಳಿ ಮನವಿ ಸಲ್ಲಿಸಲಾಯಿತು.



ಈ ಪ್ರತಿಭಟನೆಯಲ್ಲಿ ರಾಜ್ಯ ಪತ್ತಿನ ಸಹಕಾರ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಗುರುಪಾದಪ್ಪಗೌಡ ಬ. ಪಾಟೀಲ, ಶ್ರೀ ಧರೇಪ್ಪ ಎಂ. ಅಲಗೂರ, ಶ್ರೀ ಹೊನ್ನಯ್ಯ ವಿ. ಹಿರೇಮಠ, ಶ್ರೀ ಶೇಖರಗೌಡ ಮಾಲಿ ಪಾಟೀಲ, ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ, ಡಾ॥ ಸಂಜಯ ಪಂ. ಹೊಸಮತ, ವಿಜಯಪುರ ಜಿಲ್ಲೆಯ ಕೃಷಿಯೇತರ ಪತ್ತಿನ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷ, ಉಪಾಧ್ಯಕ್ಷರು ಹಾಗೂ ಜಿಲ್ಲೆಯ ಹಿರಿಯ ಸಹಕಾರಿ ಪ್ರತಿನಿಧಿಗಳು ಭಾಗವಹಿಸಿದ್ದರು.

# ಪತ್ತಿನ ಸಹಕಾರ ಸಂಘಗಳು ಕಲಂ 80P ಅಡಿಯಲ್ಲಿ ತೆರಿಗೆ ವಿನಾಯತಿ ಪಡೆಯಲು ಅರ್ಹ– ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ



**ಜಿ.ಎಸ್. ಸತ್ಯನಾರಾಯಣ**
ಬ್ಯಾಂಕಿಗ್ ತಜ್ಞರು ಮತ್ತು ಹವ್ಯಾಸಿ ಬರಹಗಾರರು

**ಪ್ರಸಕ್ತ ಪ್ರಕರಣದಲ್ಲಿ ಪತ್ತಿನ ಸಹಕಾರ ಸಂಘಗಳು ಸದಸ್ಯರಿಗೆ ಸಾಲ ಕೊಡುತ್ತವೆ ಅನ್ನುವ ಒಂದೇ ಕಾರಣಕ್ಕೆ ಕಲಂ 80 ಪಿ(4) ಅಡಿಯಲ್ಲಿ ಸಹಕಾರ ಬ್ಯಾಂಕುಗಳು ಎಂದು ವ್ಯಾಖ್ಯೆ ಮಾಡುವಂತಿಲ್ಲ ಎಂದು ಸರ್ವೋಚ್ಚ ನ್ಯಾಯಾಲಯ ಅಭಿಪ್ರಾಯ ಪಟ್ಟಿದೆ ಹಾಗೂ ಪತ್ತಿನ ಸಹಕಾರ ಸಂಘಗಳು ಮತ್ತು ಸಹಕಾರ ಬ್ಯಾಂಕುಗಳು ನಡೆಸುವ ವ್ಯವಹಾರಕ್ಕೂ ಬಹಳ ದೊಡ್ಡ ಅಂತರವಿದೆ ಎಂದು ಮಾನ್ಯ ಸರ್ವೋಚ್ಚ ನ್ಯಾಯಾಲಯ ಅಭಿಪ್ರಾಯ ಪಟ್ಟಿದೆ.**



ಇತ್ತಿಚೆಗೆ 20.4.2023 ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಕಮಿಶನರ್ ಆಫ್ ಇನ್‌ಕಂ ಟ್ಯಾಕ್ಸ್ ವರ್ಸಸ್ ಅಣ್ಣಾಸಾಹೇಬ್ ಪಾಟಿಲ್ ಮಥಾದಿ ಕಾಮ್‌ಗಾರ್ ಸಹಕಾರ ನಿಯಮಿತದ ವಿವಾದ ಪ್ರಕರಣದಲ್ಲಿ ಬಹಳ ಮಹತ್ವದ ಆದೇಶ ಹೊರಡಿಸಿದೆ. ವಿವಾದದ ವಿವರ ಈ ರೀತಿ ಇದೆ. ಈ ಹಿಂದೆ 14.10.2019 ರಂದು ಮಾನ್ಯ ಬಾಂಬೆ ಉಚ್ಚ ನ್ಯಾಯಾಲಯದಲ್ಲಿ ಆದಾಯ ತೆರಿಗೆ ಅಧಿನಿಯಮದಡಿಯಲ್ಲಿ ಅಣ್ಣಾಸಾಹೇಬ್ ಪಾಟಿಲ್ ಮಥಾದಿ ಕಾಮ್‌ಗಾರ್ ಸಹಕಾರ ಸಂಘ ಒಂದು ಪತ್ತಿನ ಸಹಕಾರ ಸಂಘವಾಗಿದ್ದು ಕಲಂ 80 ಪಿ(4) ಅನ್ವಯ ತೆರಿಗೆ ವಿನಾಯತಿ ಪಡೆಯಲು ಅರ್ಹವೇ ಎಂಬ ವಿವಾದದ ಬಗ್ಗೆ ಪ್ರಕರಣ ಇತ್ಯರ್ಥವಾಗಿದ್ದು ಈ ಸಹಕಾರ ಸಂಘದ ಪರವಾಗಿ ತೀರ್ಪು ಬಂದಿತ್ತು. ಈ ತೀರ್ಪು ಕ್ವಿಪೇನ್ ಅರ್ಬನ್ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿ ವರ್ಸಸ್ ಅಸಿಸ್ಟೆಂಟ್ ಕಮಿಶನರ್ ಆಫ್ ಇನ್‌ಕಂ ಟ್ಯಾಕ್ಸ್ ಮೇಲ್ಮನವಿ ಪ್ರಕರಣದ ಆಧಾರದ ಮೇಲೆ ನೀಡಲಾಗಿತ್ತು. ಮಾನ್ಯ ಉಚ್ಚ ನ್ಯಾಯಾಲಯ ಅಣ್ಣಾಸಾಹೇಬ್ ಪಾಟಿಲ್ ಮಥಾದಿ ಕಾಮ್‌ಗಾರ್ ಸಹಕಾರ ಸಂಘ ಕಲಂ 80 ಪಿ(4) ಅಡಿಯಲ್ಲಿ ವಿನಾಯಿತಿ ಪಡೆಯಲು ಅರ್ಹ ಎಂದು ತೀರ್ಪು ನೀಡಿತ್ತು. ಸರ್ವೋಚ್ಚ ನ್ಯಾಯಾಲಯ ಕೂಡ ಈ ಹಿಂದೆ ನವಿಲಾಯಿ ಸರ್ವಿಸ್ ಕೋ–ಆಪರೇಟಿವ್ ಬ್ಯಾಂಕ್ ವರ್ಸಸ್ ಕಮಿಶನರ್ ಆಫ್ ಇನ್‌ಕಂ ಟ್ಯಾಕ್ಸ್ ಕ್ಯಾಲಿಕಟ್ ಪ್ರಕರಣದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆ ಅಡಿಯಲ್ಲಿ ಸಹಕಾರ ಬ್ಯಾಂಕುಗಳ ವ್ಯಾಪ್ತಿಗೆ ಬರುವುದಿಲ್ಲ ಎಂದು ತೀರ್ಪು ನೀಡಿತ್ತು. ಪ್ರಸಕ್ತ ಪ್ರಕರಣದಲ್ಲಿ ಪತ್ತಿನ ಸಹಕಾರ ಸಂಘಗಳು ಸದಸ್ಯರಿಗೆ ಸಾಲ ಕೊಡುತ್ತವೆ ಅನ್ನುವ ಒಂದೇ ಕಾರಣಕ್ಕೆ ಕಲಂ 80 ಪಿ(4) ಅಡಿಯಲ್ಲಿ ಸಹಕಾರ ಬ್ಯಾಂಕುಗಳು ಎಂದು ವ್ಯಾಖ್ಯೆ ಮಾಡುವಂತಿಲ್ಲ ಎಂದು ಸರ್ವೋಚ್ಚ ನ್ಯಾಯಾಲಯ ಅಭಿಪ್ರಾಯ ಪಟ್ಟಿದೆ ಹಾಗೂ ಪತ್ತಿನ ಸಹಕಾರ ಸಂಘಗಳು ಮತ್ತು ಸಹಕಾರ ಬ್ಯಾಂಕುಗಳು ನಡೆಸುವ ವ್ಯವಹಾರಕ್ಕೂ ಬಹಳ ದೊಡ್ಡ ಅಂತರವಿದೆ ಎಂದು ಮಾನ್ಯ ಸರ್ವೋಚ್ಚ ನ್ಯಾಯಾಲಯ ಅಭಿಪ್ರಾಯ ಪಟ್ಟಿದೆ.

ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆ, 1949ರ ಪರಿಭಾಷೆಯ ಪ್ರಕಾರ ಸಹಕಾರ ಬ್ಯಾಂಕುಗಳು ಸಾರ್ವಜನಿಕರಿಂದ ಠೇವಣಿ ಸಂಗ್ರಹಣೆ ಮಾಡಬಹುದು. ಸದಸ್ಯರಿಗೆ ಸಾಲ ಕೊಡಬಹುದು. ರಿಸರ್ವ್ ಬ್ಯಾಂಕಿನ ನಿರ್ದೇಶನದಂತೆ ಇತರ ಬ್ಯಾಂಕಿಂಗ್ ವ್ಯವಹಾರವನ್ನು ನಡೆಸಬಹುದು. ಆದರೆ ಪತ್ತಿನ ಸಹಕಾರ ಸಂಘಗಳು ಸದಸ್ಯರಿಂದ ಮಾತ್ರ ಠೇವಣಿ ಸಂಗ್ರಹಣೆ ಮಾಡಬಹುದು, ಬ್ಯಾಂಕಿಂಗ್ ವ್ಯವಹಾರವನ್ನು ಮಾಡುವಂತಿಲ್ಲ. ಈ ಕಾರಣಗಳಿಂದ ಪತ್ತಿನ ಸಹಕಾರ ಸಂಘಗಳಿಗೂ ಸಹಕಾರ ಬ್ಯಾಂಕುಗಳಿಗೂ ದೊಡ್ಡ ವ್ಯತ್ಯಾಸವಿದೆ ಎಂದು ಮಾನ್ಯ ಸರ್ವೋಚ್ಚ ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಈ ಆದೇಶದಿಂದ ದೇಶದಲ್ಲಿರುವ ಎಲ್ಲಾ ಪತ್ತಿನ ಸಹಕಾರ ಸಂಘಗಳಿಗೆ ತೆರಿಗೆ ವಿನಾಯಿತಿ ವಿಷಯದಲ್ಲಿ ಗೊಂದಲ ನಿವಾರಣೆಯಾಗಿ ಪರಿಹಾರ ಸಿಕ್ಕಂತಾಗಿದೆ.